ಸಂಪುಟ : 9 ಸಂಚಿಕೆ 214 ಪುಟ : 4 ಬೆಲೆ: 3.00 ಬುಧವಾರ ಅಕ್ಟೋಬರ್ 2 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 214 Pages : 4 Price : 3.00 Wednesday October 2 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪೂರ್ವಭಾವಿ ಸಭೆ ನಾಳೆ

■ವಿಜಯಸಾಕ್ಷಿ ಸುದ್ದಿ, ರೋಣ

ಅ.17ರಂದು ಆಚರಿಸಲ್ಪಡುವ ಮಹರ್ಷಿ ವಾಲ್ಮೀಕಿ ಜಯಂತ್ಯುತ್ಸವದ ಕುರಿತು ಅ.3ರಂದು ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ಬೆಳಿಗ್ಗೆ 11ಕ್ಕೆ ತಹಸೀಲ್ದಾರ್ ನಾಗರಾಜ ಕೆ ಅವರ ಅಧ್ಯಕ್ಷತೆಯಲ್ಲಿ ಪೂರ್ವಭಾವಿ ಸಭೆಯನ್ನು ಕರೆಯಲಾಗಿದೆ.

ಈ ಸಭೆಗೆ ತಾಲೂಕಾ ಮಟ್ಟದ ಎಲ್ಲ ಇಲಾಖೆಗಳ ಅಧಿಕಾರಿಗಳು, ಸಮಾಜದ ಬಂಧುಗಳು ಸೇರಿದಂತೆ ಸ್ಥಳೀಯ ಜನಪ್ರತಿನಿಧಿಗಳು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ನಾಗರಿಕರು ಆಗಮಿಸಿ ಸಲಹೆ-ಸೂಚನೆಗಳನ್ನು ನೀಡಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಪ್ರಕಟಣೆ ತಿಳಿಸಿದೆ.

### ಬಾಗಿದ ವಿದ್ಯುತ್ ಕಂಬವನ್ನು ಸರಿಪಡಿಸಲಾಗದ ಸ್ಥಿತಿಯಲ್ಲಿ ಆಡಳಿತ

## ಅಪಾಯಕ್ಕೂ ಮುನ್ನ ಎಚ್ಚೆತ್ತುಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ರೋಣ

ರೋಣ-ಹುಬ್ಬಳ್ಳಿ ಮುಖ್ಯ ರಸ್ತೆಯಲ್ಲಿರುವ ಜೋಡು ರಸ್ತೆಯ ವಿದ್ಯುತ್ ಕಂಬವೊಂದು ಬಾಗಿ ನಿಂತು ತಿಂಗಳುಗಳೇ ಗತಿಸಿದರೂ ಆಡಳಿತ ವ್ಯವಸ್ಥೆ ಮಾತ್ರ ಸರಿಪಡಿಸಲಾಗದ ಸ್ಥಿತಿ ತಲುಪಿರುವುದು ನಾಚಿಕೆ ತರುವ ಸಂಗತಿ ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸುತ್ತಿದ್ದಾರೆ.

ನಿತ್ಯ ನೂರಾರು ವಾಹನಗಳು ಹಾಗೂ ಸಾವಿರಾರು ಜನರು ಸಂಚರಿಸುವ ಈ ರಸ್ತೆಯಲ್ಲಿ ವಿದ್ಯುತ್ ಕಂಬವೊಂದು ಬಾಗಿ ನಿಂತಿರುವುದು ಇದೇ ರಸ್ತೆಯಲ್ಲಿ ಸಂಚಾರ ಮಾಡುವ ಅಧಿಕಾರಿಗಳಿಗೆ ಕಾಣದಿರುವುದು ಆಡಳಿತದ ವ್ಯವಸ್ಥೆಗೆ ಹಿಡಿದ ಕೈಗನ್ನಡಿ ಎನ್ನುವಂತಾಗಿದೆ.

ರೋಣ-ಹುಬ್ಬಳ್ಳಿ ರಸ್ತೆಗೆ ಹೊಂದಿಕೊಂಡಂತೆ ಜೋಡು ರಸ್ತೆಯನ್ನು ನಿರ್ಮಿಸಲಾಗಿದೆ. ಈ ರಸ್ತೆಯಲ್ಲಿ ರಾತ್ರಿ ಸಮಯದಲ್ಲಿ ಪಟ್ಟಣದ ಸೌಂದರ್ಯವನ್ನು ಹೆಚ್ಚಿಸಲು ವಿದ್ಯುತ್ ದೀಪದ ಕಂಬಗಳನ್ನು ಅಳವಡಿಕೆ ಮಾಡಲಾಗಿದ್ದು, ತಿಂಗಳ ಹಿಂದೆ ಅಪರಿಚಿತ ವಾಹನವೊಂದು ವಿದ್ಯುತ್ ಕಂಬಕ್ಕೆ ಡಿಕ್ಕಿ ಹೊಡೆದ ಪರಿಣಾಮ ಕಂಬ ಬಾಗಿ ನಿಂತಿದೆ. ಇದರಿಂದ ಈ ರಸ್ತೆಯಲ್ಲಿ ರಾತ್ರಿ ಬೆಳಕು ಮರೀಚಿಕೆಯಾಗಿದ್ದು, ಸಾರ್ವಜನಿಕರು ಭಯದಲ್ಲಿ ಸಂಚಾರ ಮಾಡುವ ಸ್ಥಿತಿ ನಿರ್ಮಾಣವಾಗಿದೆ.

ಮುಖ್ಯವಾಗಿ, ಕಂದಾಯ ಇಲಾಖೆ, ಪುರಸಭೆ, ತಾ.ಪಂ, ಸರಕಾರಿ ಆಸ್ಪತ್ರೆ, ಕೃಷಿ, ತೋಟಗಾರಿಕೆ, ಪಶು ಆಸ್ಪತ್ರೆ ಸೇರಿದಂತೆ ವಿವಿಧ ಇಲಾಖೆಗಳು ಸಹ ಇದೇ ರಸ್ತೆಯಲ್ಲಿ ಕಾರ್ಯ ನಿರ್ವಹಿಸುತ್ತಿವೆ. ಅಲ್ಲದೆ ಪ್ರೌಢಶಾಲೆ, ಕಾಲೇಜುಗಳು ಸಹ ಇರುವುದು ಅಧಿಕಾರಿಗಳಿಗೆ ತಿಳಿದಿಲ್ಲವೇ ಅಥವಾ ಜಾಣ ಕುರುಡುತನವೇ ಎಂಬ ಪ್ರಶ್ನೆ ಸಾರ್ವಜನಿಕರದ್ದಾಗಿದೆ.

ಇನ್ನಾದರೂ ಸದರಿ ಬಾಗಿದ ವಿದ್ಯುತ್ ಕಂಬವನ್ನು ಸರಿಪಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡುವರೇ ಎಂಬುದನ್ನು ಎದುರುನೋಡುವಂತಾಗಿದೆ.

### ರೋಣ ತಾಲೂಕಿನ ವಿವಿಧ ಗ್ರಾ.ಪಂಗೆ ಭೇಟಿ ನೀಡಿ, ಕಾಮಗಾರಿ ವೀಕ್ಷಣೆ ನಡೆಸಿದ ಸಿಇಓ ಭರತ್ ಎಸ್

# ಮಕ್ಕಳ ಜೊತೆ ಬಿಸಿಯೂಟ ಸವಿದ ಸಿಇಒ

■ವಿಜಯಸಾಕ್ಷಿ ಸುದ್ದಿ, ರೋಣ

ಗದಗ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ರೋಣ ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ ಅನುಷ್ಠಾನಗೊಂಡ ವಿವಿಧ ಕಾಮಗಾರಿಗಳ ಪರಿಶೀಲನೆ ನಡೆಸಿದರು.

ಯಾವಗಲ್, ಬೆಳವಣಕಿ, ಮಲ್ಲಾಪೂರ, ಚಿಕ್ಕಮಣ್ಣೂರ ಗ್ರಾಮದಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ನಿರ್ಮಿಸಲಾದ ಸಿಸಿ ರಸ್ತೆ ಹಾಗೂ ಚರಂಡಿ ಕಾಮಗಾರಿ, ಬದು ನಿರ್ವಹಣೆ ಕಾಮಗಾರಿ, ಗ್ರಂಥಾಲಯ, ದನದ ಕೊಟ್ಟಿಗೆ, ವೈಯಕ್ತಿಕ ಶೌಚಾಲಯ, ಘನತ್ಯಾಜ್ಯ ವಿಲೇವಾರಿ ಘಟಕ ಸೇರಿದಂತೆ ವಿವಿಧ ಕಾಮಗಾರಿಗಳನ್ನು ವೀಕ್ಷಣೆ ಮಾಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಕಾಮಗಾರಿ ಕಡತಗಳು ಹಾಗೂ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಅಳತೆಯ ಪ್ರಮಾಣವನ್ನು ಪರಿಶೀಲನೆ ನಡೆಸಿದರು.

ಯಾವಗಲ್ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಸಿಇಓ ಅವರು ಆರೋಗ್ಯ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುವ ಸಿಬ್ಬಂದಿಗಳು, ರಿಜಿಸ್ಟರ್ ಪರಿಶೀಲಿಸಿ ಮಾಹಿತಿ ಪಡೆದರು. ಸೆಪ್ಟೆಂಬರ್ ತಿಂಗಳಲ್ಲಿ ಎಷ್ಟು ಜನರ ರಕ್ತ ತಪಾಸಣೆ ಮಾಡಿಸಲಾಗಿದೆ, ಅದರಲ್ಲಿ ಹಿಮೋಗ್ಲೋಬಿನ್ ಕೊರತೆ ಎಷ್ಟು ಮಕ್ಕಳಿಗೆ ಇದೆ ಎಂಬುದರ ಕುರಿತು ಮಾಹಿತಿ ಪಡೆದರು. ಆಸ್ಪತ್ರೆಯನ್ನು ಶುಚಿಯಾಗಿ ಇಡಲು ಸೂಚನೆ ನೀಡಿದ ಅವರು, ಆಸ್ಪತ್ರೆಯಲ್ಲಿ ಸರಿಯಾದ ರೀತಿಯಲ್ಲಿ ಕೆಲಸ ಮಾಡಲು ಅಲ್ಲಿನ ಸಿಬ್ಬಂದಿಗಳಿಗೆ ಎಚ್ಚರಿಕೆ ನೀಡಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಇದುವರೆಗೂ ಸಹಜ ಹೆರಿಗೆಯಾಗಿಲ್ಲ. ನಾವು ಬೇರೆ ಊರಿಗೆ ಹೋಗಬೇಕಾಗುತ್ತದೆ ಎಂದು ಸಾರ್ವಜನಿಕರು ದೂರಿದರು. ಈ ಕುರಿತು ಸಿಬ್ಬಂದಿಗಳಿಂದ ಮಾಹಿತಿ ಪಡೆದ ಅವರು, ಕೇಂದ್ರದಲ್ಲಿ ಸಹಜ ಹೆರಿಗೆಯನ್ನು ಮಾಡಲು ಸೂಚನೆ ನೀಡಿದರು. ಸಹಜ ಹೆರಿಗೆಗೆ ಬೇಬಿ ವಾರ್ಮ್ ಹಾಗೂ 7 ಟ್ರೇಸ್ ನೀಡಲು ತಾಲೂಕು ಅಧಿಕಾರಿಗೆ ಸೂಚನೆ ನೀಡಿದರು.

ಬಳಿಕ ಗ್ರಾಮದ ಗ್ರಂಥಾಲಯಕ್ಕೆ ಭೇಟಿ ನೀಡಿ, ಬೆಳವಣಕಿ ಹಾಗೂ ಯಾವಗಲ್ ಗ್ರಾಮದಲ್ಲಿ ಸಿಸಿ ರಸ್ತೆ ನಿರ್ಮಾಣದ ಅಳತೆ ಹಾಗೂ ಗ್ರಾಮದಲ್ಲಿ ನಿರ್ಮಾಣವಾದ ಉದ್ಯಾನವನ ಬದು ನಿರ್ವಹಣೆ ಕಾಮಗಾರಿಗಳ ಪರಿಶೀಲನೆ ನಡೆಸಿದರು.

ರೋಣ ತಾಲೂಕಿನ ಮಲ್ಲಾಪೂರ ಗ್ರಾ.ಪಂನ ಸರಕಾರಿ ಪ್ರೌಢಶಾಲೆಗೂ ದಿಢೀರ್ ಭೇಟಿ ನೀಡಿದ ಸಿಇಓ ಭರತ ಎಸ್, ಮಕ್ಕಳ ಜೊತೆಗೂಡಿ ಕೆಳಗೆ ಕುಳಿತು ಮಧ್ಯಾಹ್ನದ ಬಿಸಿಯೂಟ ಸವಿದು ಮಕ್ಕಳಿಗೆ ನೀಡುವ ಆಹಾರದ ಗುಣಮಟ್ಟ ಪರಿಶೀಲಿಸಿದರು. ಊಟ ಮಾಡುತ್ತ ವಿದ್ಯಾರ್ಥಿಗಳೊಂದಿಗೆ ಕೆಲ ಹೊತ್ತು ಪ್ರಶ್ನೋತ್ತರ ನಡೆಸಿದ ಅವರು, ಮೂಲಭೂತ ಸೌಕರ್ಯ ಹಾಗೂ ಊಟದ ಗುಣಮಟ್ಟ, ಇನ್ನಿತರ ಸೌಲಭ್ಯಗಳ ಕುರಿತು ವಿದ್ಯಾರ್ಥಿಗಳಿಂದ ಮಾಹಿತಿ ಪಡೆದರು. ಶಾಲೆಯಲ್ಲಿ ಬೋಧನಾ ಗುಣಮಟ್ಟ, ಶೌಚಾಲಯ, ಸ್ವಚ್ಛ ಕುಡಿಯುವ ನೀರಿನ ಸೌಲಭ್ಯ, ಅಡುಗೆ ಕೋಣೆಗಳಿಗೆ ಭೇಟಿ ನೀಡಿ ಸ್ವಚ್ಛತೆಯನ್ನು ಅವಲೋಕಿಸಿದರು.

ಈ ಸಂದರ್ಭದಲ್ಲಿ ರೋಣ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಮಂಜುಳಾ ಹಕಾರಿ, ಸಹಾಯಕ ನಿರ್ದೇಶಕರಾದ (ಗ್ರಾ.ಉ) ಚಂದ್ರಶೇಖರ ಬಿ.ಕಂದಕೂರ, ಎಲ್ಲಾ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ವಿವಿಧ ಗ್ರಾಮ ಪಂಚಾಯಿತಿಗಳ ಚುನಾಯಿತ ಜನಪ್ರತಿನಿಧಿಗಳು, ತಾಲೂಕು ಮಟ್ಟದ ಅಧಿಕಾರಿಗಳು, ಖಿಅ, ಖಿಙಇಅ, ಖಿಂ, ಃಈಖಿ ಹಾಗೂ ಗ್ರಾಮ ಪಂಚಾಯಿತಿ ಸಿಬ್ಬಂದಿಗಳು ಹಾಜರಿದ್ದರು.



> ಮಲ್ಲಾಪೂರ ಗ್ರಾಮದ ವಿವಿಧ ಕಾಮಗಾರಿಗಳ ವೀಕ್ಷಣೆ ಬಳಿಕ ಸರಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ಶಾಲೆಯಲ್ಲಿರುವ ಮಕ್ಕಳ ಸಂಖ್ಯೆ ಬಗ್ಗೆ ಮಾಹಿತಿ ಪಡೆದರು. ಮಕ್ಕಳ ಸಂಖ್ಯೆ ಕಡಿಮೆ ಆಗಲು ಕಾರಣವನ್ನು ಮಕ್ಕಳಿಂದ ಕೇಳಿ ಪಡೆದರು. ಮಕ್ಕಳಿಗೆ ತಮ್ಮ ಪರಿಚಯ ಮಾಡಿಕೊಂಡು ಪ್ರತ್ಯೇಕವಾಗಿ 15 ನಿಮಿಷಗಳ ಕಾಲ ಶಾಲಾ ಕೊಠಡಿಯಲ್ಲಿ ಮಕ್ಕಳೊಂದಿಗೆ ಸಂವಾದ ನಡೆಸಿದರು.




# ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಪಾದಯಾತ್ರೆ

■ವಿಜಯಸಾಕ್ಷಿ ಸುದ್ದಿ, ಗದಗ

ಗಾಂಧೀಜಿ ಅಧ್ಯಕ್ಷತೆಯ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಅಧಿವೇಶನಕ್ಕೆ 100 ವರ್ಷಗಳ ಹಿನ್ನೆಲೆಯಲ್ಲಿ ಗದಗ ನಗರದಲ್ಲಿ ಅ.2ರಂದು ಗದಗ ನಗರದಲ್ಲಿ ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಪಾದಯಾತ್ರೆ ನಡೆಯಲಿದೆ.

ಬೆಳಿಗ್ಗೆ 9 ಗಂಟೆಗೆ ಗಾಂಧೀಜಿಯವರ ಚಿತಾಭಸ್ಮ ಇರುವ ರಾಮಕೃಷ್ಣ ಆಶ್ರಮದಿಂದ ರಾಜ್ಯದ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ರೋಣದ ಶಾಸಕರೂ ಆಗಿರುವ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಜಿ.ಎಸ್. ಪಾಟೀಲ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರ ನೇತೃತ್ವದಲ್ಲಿ ಮಾಜಿ ಶಾಸಕರಾದ




ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್ಲ, ಜಿ.ಎಸ್. ಗಡ್ಡದ್ದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಕೆಪಿಸಿಸಿ ಗದಗ ಜಿಲ್ಲಾ ಉಸ್ತುವಾರಿಗಳಾದ ಹಸನಸಾಬ ದೋಟಿಹಾಳ, ಮೋಹನ ಅಸುಂಡಿ, ಮುಖಂಡರಾದ ಆನಂದ ಗಡ್ಡದ್ದೇವರಮಠ, ಸುಜಾತಾ ದೊಡ್ಡಮನಿ ಸೇರಿದಂತೆ ಹಲವರು ಪಾಲ್ಗೊಳ್ಳಲಿದ್ದಾರೆ.

ಹಾಲಿ, ಮಾಜಿ ಶಾಸಕರು, ಕಾಂಗ್ರೆಸ್ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್, ಪಕ್ಷದ ಜಿಲ್ಲಾ ಪಂಚಾಯತ್, ತಾಲೂಕ ಪಂಚಾಯತ, ಗ್ರಾಮ ಪಂಚಾಯತ, ಎ.ಪಿ.ಎಂ.ಸಿ, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ ಸೇರಿದಂತೆ ಕಾಂಗ್ರೆಸ್‌ನ ಎಲ್ಲ ಘಟಕಗಳ ಅಧ್ಯಕ್ಷರು, ಸದಸ್ಯರು ಹಾಗೂ ಪದಾಧಿಕಾರಿಗಳು ಹಾಜರಾಗಲು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ವಿ.ಬಿ. ಸೋಮನಕಟ್ಟಿಮಠ, ಶಹರ ಬ್ಲಾಕ್ ಕಾಂಗ್ರೆಸ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ವಿನಂತಿಸಿದ್ದಾರೆ.

> **ಗಾಂಧಿ ವೃತ್ತದಲ್ಲಿ ಬಹಿರಂಗ ಸಭೆ**
>
> ರಾಮಕೃಷ್ಣ ಆಶ್ರಮದಿಂದ ಆರಂಭವಾಗುವ ಪಾದಯಾತ್ರೆಯು ಎಪಿಎಂಸಿ ಮೂಲಕ ನಗರದ ಗಾಂಧಿ ವೃತ್ತದಲ್ಲಿ ಬಹಿರಂಗ ಸಭೆಯಾಗಿ ಮಾರ್ಪಡಲಿದೆ. ಇದೇ ವೇಳೆ ಕೆಪಿಸಿಸಿಯಿಂದ ಬೆಂಗಳೂರಿನಲ್ಲಿ ನಡೆಯುವ ಈ ಕಾರ್ಯಕ್ರಮದ ನೇರ ಪ್ರಸಾರ ವೀಕ್ಷಣೆಗೆ ಬೃಹತ್ ಎಲ್‌ಎಡಿ ಪರದೆ ಅಳವಡಿಸಲಾಗಿದ್ದು, ಆ ಮೂಲಕ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿದೆ.

## ಹಂಪಿನಗೇರಿ ಓಣಿಯಲ್ಲಿ ಕಾಮಗಾರಿಗೆ ಚಾಲನೆ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆಯ 23ನೇ ವಾರ್ಡಿನ ಹಂಪಿನಗೇರಿ ಓಣಿಯಲ್ಲಿರುವ ಸರಫರಾಜ ಲಕ್ಕುಂಡಿಯವರ ಮನೆಯಿಂದ ರೆಹಮಾನಿಯಾ ಮಸ್ಜಿದ್‌ವರೆಗಿನ ಚರಂಡಿ ನಿರ್ಮಾಣ ಕಾಮಗಾರಿಯನ್ನು ಮುಖ್ಯಮಂತ್ರಿಗಳ ಅಮೃತ ನಗರೋತ್ಥಾನ ಯೋಜನೆಯಡಿಯಲ್ಲಿ ನಗರಸಭೆಯ ಸದಸ್ಯ ಹಾಗೂ ವಿರೋಧ ಪಕ್ಷದ ಉಪನಾಯಕರಾದ ಜನಾಬ ಬರಕತಲಿ ಮುಲ್ಲಾ ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.

ಈ ಸಂಧರ್ಭದಲ್ಲಿ ಕಾಂಗ್ರೆಸ್ ಮುಖಂಡರಾದ ಜನಾಬ ಆಶೀಫ್ ಮುಲ್ಲಾ, ಖಾಜಾ ಮೇಸ್ತ್ರಿ, ಎನ್.ಎ. ಲಕ್ಕುಂಡಿ, ಸಮೀರ್ ಜಮಾದಾರ, ಮುಸ್ತಾಕ್ ಮನಿಯಾರ, ನಜೀರ ಕುನ್ನಿಬಾವಿ, ಅಸ್ಲಮ್ ಮನಿಯಾರ, ಅಲ್ತಾಫ್ ಅಣ್ಣಿಗೇರಿ, ಶಾಹೀದ ಮುಲ್ಲಾ, ಅಲ್ತಾಫ್ ಮುಜಾವರ, ಶಾಬಾಜ್ ಮುಲ್ಲಾ, ಹನಮಂತ ಕುರುಬರ, ಮುಸ್ತಾಕ್ ಲಕ್ಕುಂಡಿ, ಶಮ್ಮು ಅಣ್ಣಿಗೇರಿ, ಶಶಿಧರ್ ಇರಕಲ್, ಅಬ್ದುಲ್ ಸತ್ತಾರ್ ಕೊಪ್ಪಳ, ಫಾರೂಕ್ ಅಕ್ಕಿ, ನಾಝಿಮ್ ಬಿಕ್ಕುನರ್, ನಾಶಿರ್ ತಾಂಬುಲಿ, ಸೈಪಣ್ಣವರ, ವಕೀಲರು ಹಾಗೂ ಸಾಮಾಜಿಕ ಕಾರ್ಯಕರ್ತರಾದ ರಾಘವೇಂದ್ರ ಪಾಲನಕರ ಸ್ಥೆರಿದಂತೆ ಓಣಿಯ ಸಮಸ್ತ ನಾಗರಿಕರು ಹಾಗೂ ವಾರ್ಡಿನ ಮುಖಂಡರು ಉಪಸ್ಥಿತರಿದ್ದರು.

### ವಿಶ್ವ ಹೃದಯ ದಿನಾಚರಣೆ ಕಾರ್ಯಕ್ರಮದಲ್ಲಿ ಡಾ. ಬಿ.ಸಿ. ಕರಿಗೌಡರ

# ಹೃದಯದ ಆರೋಗ್ಯದ ಕಾಳಜಿಯಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿಶ್ವ ಹೃದಯ ದಿನದ ಅಂಗವಾಗಿ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಜಿಲ್ಲಾ ಆಸ್ಪತ್ರೆ, ಜಿಲ್ಲಾ ಮಾಹಿತಿ ಶಿಕ್ಷಣ ಮತ್ತು ಸಂವಹನ ವಿಭಾಗ ಹಾಗೂ ಜಿಮ್ಸ್ ಸರಕಾರಿ ನರ್ಸಿಂಗ್ ಕಾಲೇಜ್, ಗದಗ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಜಿಮ್ಸ್ ನರ್ಸಿಂಗ್ ಕಾಲೇಜಿನಲ್ಲಿ ವಿಶ್ವ ಹೃದಯ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗಿತ್ತು.

ಜಿಲ್ಲಾ ಶಸ್ತ್ರಚಿಕಿತ್ಸಕರಾದ ಡಾ. ಬಿ.ಸಿ. ಕರಿಗೌಡರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ವಿಶ್ವ ಹೃದಯ ದಿನವನ್ನು ಪರಿಣಾಮಕಾರಿಯಾಗಿ ಜನರಲ್ಲಿ ಜಾಗೃತಿಯನ್ನು ಮೂಡಿಸುವುದು ನಮ್ಮೆಲ್ಲರ ಮುಖ್ಯ ಕರ್ತವ್ಯವಾಗಿದೆ. ಕೋವಿಡ್ ಗಂಡಾಂತರದ ನಂತರ ಹೃದಯ ಸಂಬಂಧಿ ಕಾಯಿಲೆಗಳು ಗಣನೀಯವಾಗಿ ಹೆಚ್ಚಿಗೆಯಾಗಿರುವುದರಿಂದ ಅವುಗಳನ್ನು ಹತೋಟಿಗೆ ತರಲು ಶ್ರಮಿಸಬೇಕೆಂದು ತಿಳಿಸಿದರು.



ವೈದ್ಯಕೀಯ ವಿಭಾಗದ ಮುಖ್ಯಸ್ಥರಾದ ಡಾ.ಸಂಗಮೇಶ ಅಸೂಟಿ ಮಾತನಾಡಿ, ಆಧುನಿಕ ಜೀವನ ಶೈಲಿ, ಧೂಮಪಾನ, ಮಧುಮೇಹ, ಅಧಿಕ ರಕ್ತದೊತ್ತಡ, ಬೊಜ್ಜು, ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಇವೆಲ್ಲವುದರ ಕಾರಣಗಳಿಂದಾಗಿ ಹೃದಯಕ್ಕೆ ಸಂಬಂಧಿಸಿದ ಸಮಸ್ಯೆಗಳು ಹೆಚ್ಚಾಗಿ ಕಾಣಿಸಿಕೊಳ್ಳುತ್ತಿರುವುದು ಎಚ್ಚರಿಕೆಯ ಗಂಟೆಯಾಗಿದೆ. ಕೊರೋನಾ ನಚಿತರದ ದಿನಗಳಲ್ಲಿ ಹೃದ್ರೋಗದ ಪ್ರಕರಣಗಳು ಹೆಚ್ಚಾಗುತ್ತಿದ್ದು, ಯುವ ಜನರೇ ಹೆಚ್ಚಿನ ಸಂಖ್ಯೆಯಲ್ಲಿ ಹಠಾತ್ತಾಗಿ ಹೃದಯಾಘಾತ, ಹೃದಯ ಸ್ತಂಭನಕ್ಕೀಡಾಗಿ ಜೀವ ಕಳೆದುಕೊಳ್ಳುತ್ತಿದ್ದಾರೆ. ಹೃದ್ರೋಗಳಿಂದ ಉಂಟಾಗುತ್ತಿರುವ ಜೀವ ಹಾನಿ ಪ್ರಮಾಣವನ್ನು ತಗ್ಗಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರವು 'ಪುನೀತ್‌ರಾಜ್‌ಕುಮಾರ್ ಹೃದಯ ಜ್ಯೋತಿ' ಮುಂತಾದ ಕಾರ್ಯಕ್ರಮಗಳನ್ನು ಕೈಗೊಂಡಿದೆ ಎಂದು ತಿಳಿಸಿದರು.

ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥರಾದ ಡಾ. ಜ್ಯೋತಿ ಕ್ಷರಿಗೌಡರ ಮಾತನಾಡಿ, ನಮ್ಮ ದೇಹವನ್ನು ಸಧೃಡವಾಗಿಟ್ಟುಕೊಳ್ಳಲು ಪ್ರತಿದಿನ ವ್ಯಾಯಾಮ, ಯೋಗಾಸನ, ಪೌಷ್ಟಿಕ ಆಹಾರ ಹಾಗೂ ಉತ್ತಮ ಆರೋಗ್ಯಕ್ಕಾಗಿ ಕನಿಷ್ಠ 7ರಿಂದ 8 ಗಂಟೆಯವರೆಗೆ ಆರೋಗ್ಯಕರ ನಿದ್ರೆ ಅವಶ್ಯಕವಾಗಿರುತ್ತದೆಂದು ತಿಳಿಸಿದರು.

ಈ ಸಂದರ್ಭದಲ್ಲಿ ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥರಾದ ಡಾ. ಶ್ರೀನಿವಾಸ ಆರೇರ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ್, ಜಿಮ್ಸ್ ನರ್ಸಿಂಗ್ ಕಾಲೇಜಿನ ನರ್ಸಿಂಗ್ ವಿದ್ಯಾರ್ಥಿಗಳು, ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಹಾಗೂ ಜಿಲ್ಲಾ ಸಮೀಕ್ಷಣಾ ಘಟಕದ ಅಧಿಕಾರಿಗಳು ಇದ್ದರು. ಕಾರ್ಯಕ್ರಮವನ್ನು ಎಂ.ಎಸ್. ರಬ್ಬನಗೌಡ್ರ ನಿರೂಪಿಸಿ ವಂದಿಸಿದರು.

> ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಠೋಡ್ ಮಾತನಾಡಿ, ಚಟುವಟಿಕೆಗೆ ಹೃದಯವನ್ನು ಬಳಸಿ ಎಂಬ ಘೋಷವಾಕ್ಯದೊಂದಿಗೆ ಈ ವರ್ಷದ ಹೃದಯ ದಿನವನ್ನು ಆಚರಿಸುತ್ತಿದ್ದೇವೆ. ಹೃದಯವನ್ನು ಆರೋಗ್ಯವಾಗಿಡಲು ಬೆಳಗಿನ ಅಥವಾ ಸಂಜೆಯ ನಡಿಗೆ ಸಹಾಯಕಾರಿ ಎಂದು ಅಭಿಪ್ರಾಯಪಟ್ಟರು.

## ಕಂಬೈನಡ್ ಹಾರ್ವೆಸ್ಟರ್ ಹಬ್ ಕ್ರಿಯಾ ಯೋಜನೆ ಅನುಮೋದನೆ

# ಆಸಕ್ತರಿಂದ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಕೃಷಿ ಯಂತ್ರೋಪಕರಣಗಳನ್ನು ಬಾಡಿಗೆ ಆಧಾರದಲ್ಲಿ ರೈತರಿಗೆ ವಿತರಿಸುವ ಉದ್ದೇಶದಿಂದ ಗದಗ ಜಿಲ್ಲೆಯ ಸಾಮಾನ್ಯ ವರ್ಗ ಘಟಕದ ವೈಯಕ್ತಿಕ ಫಲಾನುಭವಿಗೆ 1 ಕಂಬೈನಡ್ ಹಾರ್ವೆಸ್ಟರ್ ಹಬ್ ಕ್ರಿಯಾ ಯೋಜನೆ ಅನುಮೋದನೆಗೊಂಡಿದೆ. ಸದರಿ ಹಬ್‌ನಲ್ಲಿ ಕಡ್ಡಾಯವಾಗಿ ಕಂಬೈನಡ್ ಹಾರ್ವೆಸ್ಟರ್ ಮತ್ತು ಟ್ರಾಕ್ಟರ್ ಆಪರೇಟೆಡ್ ಬೇಲರ್ಸ ಇರತಕ್ಕದ್ದು. ಈ ಯೋಜನೆಯಡಿ ಸಾಮಾನ್ಯ ವರ್ಗ ಘಟಕದಡಿ ವೈಯಕ್ತಿಕ ಫಲಾನುಭವಿಗೆ ಗರಿಷ್ಠ 40 ಲಕ್ಷ (ಶೇ. 50% ಸಹಾಯಧನ) ಇರುತ್ತದೆ.

ಆಸಕ್ತ ರೈತರು ಅರ್ಜಿಯನ್ನು ನಿಗದಿತ ನಮೂನೆಯಲ್ಲಿ ಈ ಕೆಳಗಿನ ದಾಖಲಾತಿಯೊಂದಿಗೆ ಅಕ್ಟೋಬರ್ 15ರೊಳಗಾಗಿ ಆಯಾ ತಾಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗೆ ಅರ್ಜಿ ಸಲ್ಲಿಸುವುದು. ತಾಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಯಲ್ಲಿ ಅರ್ಜಿಗಳನ್ನು ಪರಿಶೀಲಿಸಿ, ಜಿಲ್ಲಾಮಟ್ಟದ ಉಪಕರಣ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಉಪ ಕೃಷಿ ನಿರ್ದೇಶಕರಿಗೆ ಸಲ್ಲಿಸಬೇಕು.

ನಂತರ ಉಪ ಕೃಷಿ ನಿರ್ದೇಶಕರ ಕಛೇರಿಯಿಂದ ಸ್ವೀಕೃತಗೊಂಡ ಅರ್ಜಿಗಳನ್ನು ಪರಿಶೀಲಿಸಿ ಜಿಲ್ಲಾಮಟ್ಟದ ಉಪಕರಣ ಸಮಿತಿಯಲ್ಲಿ ಮಂಡಿಸಲಾಗುವುದು. ಜಿಲ್ಲಾಮಟ್ಟದ ಸಮಿತಿ ಸಭೆಯಲ್ಲಿ ಒಂದೇ ಹಬ್‌ಗೆ ಒಂದಕ್ಕಿಂತ ಹೆಚ್ಚು ಅರ್ಜಿಗಳು ಸಲ್ಲಿಕೆಯಾಗಿ ಅರ್ಹಗೊಂಡಲ್ಲಿ ಲಾಟರಿ ಮುಖಾಂತರ ಫಲಾನುಭವಿಯನ್ನು ಆಯ್ಕೆ ಮಾಡಲಾಗುವುದು. ನಂತರ ಜಂಟಿ ಕೃಷಿ ನಿರ್ದೇಶಕರ ಕಛೇರಿಯಿಂದ ಅಯ್ಕೆಯಾದ ಫಲಾನುಭವಿಗೆ ಕೃಷಿ ಯಂತ್ರೋಪಕರಣಗಳನ್ನು ದಾಸ್ತಾನೀಕರಿಸಲು ಕಾರ್ಯಾದೇಶ ನೀಡಲಾಗುವುದು. ಹಬ್ ವಾರು ಸ್ವೀಕೃತವಾದ ಯಂತ್ರೋಪಕರಣಗಳನ್ನು ಸಂಬಂಧಿಸಿದ ರೈತ ಸಂಪರ್ಕ ಕೇಂದ್ರ ಮತ್ತು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು ಪರಿಶೀಲಿಸಿ, ಸಹಾಯಧನವನ್ನು ನಿಯಮಾನುಸಾರ ಸಂಬಂಧಿಸಿದ ಸಾಲದ ಬ್ಯಾಂಕ್ ಖಾತೆಗೆ ಕ್ರೆಡಿಟ್ ಲಿಂಕ್ಡ್ ಬ್ಯಾಕ್ ಎಂಡೆಡ್ ಸಬ್ಸಿಡಿ ಮೂಲಕ ಜಮಾ ಮಾಡಲಾಗುವುದು.

### ಅರ್ಜಿಯೊಂದಿಗೆ ಸಲ್ಲಿಸಬೇಕಾದ ವಿವರಗಳು

ಪಹಣಿ ಪ್ರತಿ, ಆಧಾರ್ ಕಾರ್ಡ್ ಪ್ರತಿ, ಬ್ಯಾಂಕ್ ಪಾಸ್‌ಬುಕ್ ಪ್ರತಿ ಮತ್ತು ಎಫ್‌ಐಡಿ ಸಂಖ್ಯೆ, ರೂ. 20 ಛಾಪಾ ಕಾಗದದ ಮೇಲೆ ಹಬ್ ಅನ್ನು ಪರಭಾರೆ ಮಾಡುವುದಿಲ್ಲವೆಂದು ಮುಚ್ಚಳಿಕೆ ಪತ್ರ (ನೋಟರಿಯೊಂದಿಗೆ), ಸಹಾಯಧನ/ ಕ್ರೆಡಿಟ್ ಲಿಂಕ್ಡ್ ಬ್ಯಾಕ್ ಎಂಡೆಡ್ ಸಬ್ಸಿಡಿ ಆಗಿರುವುದರಿಂದ ಸಂಬಂಧಿಸಿರುವ ಬ್ಯಾಂಕ್‌ನಿಂದ ತಾತ್ವಿಕ ಸಾಲ ಮಂಜೂರಾತಿ ಪತ್ರ.

ಹೆಚ್ಚಿನ ಮಾಹಿತಿಗಾಗಿ ಜಂಟಿ ಕೃಷಿ ನಿರ್ದೇಶಕರ ಕಚೇರಿ ಗದಗ ಇವರನ್ನು ಸಂಪರ್ಕಿಸಬಹುದಾಗಿದೆ.

# ಇಂದು ಗ್ರಾಮ ಸಭೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ


2024–25ನೇ ಸಾಲಿನ ಗ್ರಾಮ ಸಭೆಯು ಇಲ್ಲಿಯ ಗ್ರಾಮ ಪಂಚಾಯಿತಿ ಆವರಣದಲ್ಲಿ ಅ.2ರಂದು ಮುಂಜಾನೆ 11ಕ್ಕೆ ಆರಂಭವಾಗಲಿದೆ.

2025–26ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಕ್ರಿಯಾ ಯೋಜನೆ ತಯಾರಿಸುವುದು, ಸ್ವಚ್ಛ ಭಾರತ ಮಿಷನ್ ಯೋಜನೆ ಕುರಿತು ಚರ್ಚೆ, 15ನೇ ಹಣಕಾಸು ಯೋಜನೆಯ ಕ್ರಿಯಾ ಯೋಜನೆ ತಯಾರಿಸುವುದು ಮತ್ತು ಅಧ್ಯಕ್ಷರ ಅಪ್ಪಣೆಯ ಮೇರೆಗೆ ಗ್ರಾಮದ ವಿವಿಧ ಅಭಿವೃದ್ಧಿ, ಸಮಸ್ಯೆಗಳ ಕುರಿತು ಚರ್ಚಿಸಬಹುದು.

ವಿವಿಧ ಇಲಾಖೆಯ ಅಧಿಕಾರಿಗಳು, ಗ್ರಾ.ಪಂ ವ್ಯಾಪ್ತಿಯ ಶಾಲಾ ಮುಖ್ಯೋಪಾಧ್ಯಾಯರು, ಗ್ರಾಮ ಲೆಕ್ಕಾಧಿಕಾರಿಗಳು, ಆರೋಗ್ಯ ಕಾರ್ಯಕರ್ತರು, ಅಂಗನವಾಡಿ ಮೇಲ್ವಿಚಾರಕರು, ಶಿಕ್ಷಣ ಇಲಾಖೆಯ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಭಾಗವಹಿಸುವರು.

ನೋಡೆಲ್ ಅಧಿಕಾರಿಯಾಗಿ ತಾಲೂಕು ಪಂಚಾಯತ ಮನರೇಗಾ ಯೋಜನೆಯ ಸಹಾಯಕ ನಿರ್ದೇಶಕ ಕುಮಾರ ಪೂಜಾರ ಆಗಮಿಸುವರು. ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಅಧ್ಯಕ್ಷತೆ ವಹಿಸುವರು. ಉಪಾಧ್ಯಕ್ಷೆ ಪುಷ್ಪಾ ಪಾಟೀಲ, ಗ್ರಾ.ಪಂ ಸದಸ್ಯರು ಪಾಲ್ಗೊಳ್ಳುವರು ಎಂದು ಪಿ.ಡಿ.ಒ ರಾಜಕುಮಾರ ಭಜಂತ್ರಿ ತಿಳಿಸಿದ್ದಾರೆ.

# ಗಾಂಧೀಜಿಯವರ ಧರ್ಮದ ನೀತಿ



ಸ್ವಾತಂತ್ರ್ಯ ಸಿಗುವ ಪೂರ್ವದಲ್ಲಿ ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿಯವರು ಚರಕ ಸಂಘಕ್ಕೆ ನಿಧಿ ಸಂಗ್ರಹಿಸಲೆಂದು ಭಾರತದ ತುಂಬೆಲ್ಲ ಸಂಚರಿಸಿದರು. ಒಂದು ದಿನ ಒರಿಸ್ಸಾ ರಾಜ್ಯದ ಆದಿವಾಸಿಗಳ ಪ್ರದೇಶದಲ್ಲಿ ಅದೇ ಉದ್ದೇಶದಿಂದ ಸಭೆಯೊಂದನ್ನು ಏರ್ಪಡಿಸಲಾಗಿತ್ತು. ಗಾಂಧೀಜಿಯವರು ಜನರನ್ನು ಉದ್ದೇಶಿಸಿ ದಾನ, ಧರ್ಮದ ಮಾರ್ಗ, ನೀತಿಯುಕ್ತ ಭೋದನೆಯಿಂದ ದೇಶ ಸನ್ಮಾರ್ಗದ ಹಾದಿಯಲ್ಲಿ ನಡೆಸಲು ಜನರೇ ಅದಕ್ಕೆ ಉಸಿರಾಗಬೇಕು ಎಂದು ಪ್ರಚಂಡ ಭಾಷಣದಿಂದ ಜನರು ಪ್ರಭಾವಿತರಾದರು. ಈ ಭಾಷಣ ಮುಂದುವರೆಯುತ್ತಿರುವಾಗ ಓರ್ವ ಮುದುಕಿ ಜನರ ನಡುವೆ ನುಸುಳುತ್ತ ಮುಂದೆ ಬಂದು ತನ್ನ ಸೀರೆಯ ಸೆರಗಿನ ತುದಿಯಲ್ಲಿ ಕಟ್ಟಿಕೊಂಡಿದ್ದ ಒಂದು ತಾಮ್ರದ ನಾಣ್ಯವನ್ನು ಬಿಚ್ಚಿ ಗಾಂಧೀಜಿಯವರ ಕೈಗೆ ಕೊಟ್ಟಳು. ಮಹಾತ್ಮ ಗಾಂಧೀಜಿಯವರು ಬಹಳ ಎಚ್ಚರಿಕೆಯಿಂದ, ಗೌರವದಿಂದ, ಭಕ್ತಿಭಾವದಿಂದ ಆ ಒಂದು ತಾಮ್ರದ ನಾಣ್ಯವನ್ನು ತೆಗೆದುಕೊಂಡರು.

ಸಭೆಯಲ್ಲಿ ನಡೆದ ಈ ಘಟನೆಯನ್ನು ನೋಡಿದ ಆಗರ್ಭ ಕೋಟ್ಯಾಧೀಶನಾದ ಜಮನಾಲಾಲ್ ಬಜಾಜರು ಒಂದು ಸಂಘದ ಕೋಶಾಧ್ಯಕ್ಷರಾಗಿದ್ದರು. ಆ ನಾಣ್ಯವನ್ನು ನನಗೆ ಕೊಡಬೇಕೆಂದು ಕೇಳಿದರು. ಆಗ ಗಾಂಧೀಜಿಯವರು ಕೊಡಲಿಲ್ಲ. ಆಗ ಜಮನಾಲಾಲರು ನಾನು ಸಂಘದ ಕೋಶಾಧ್ಯಕ್ಷನಾಗಿದ್ದು ಅಲ್ಲದೆ ನನ್ನ ದಿನದ ವಹಿವಾಟು ಲಕ್ಷಾಂತರ ರೂಪಾಯಿಗಳು! ನೀವು ಒಂದು ತಾಮ್ರದ ನಾಣ್ಯವನ್ನು ನನಗೆ ಕೊಡುವುದಿಲ್ಲವೇ? ನನ್ನ ಮೇಲೆ ನಂಬಿಕೆ ಇಡುವುದಿಲ್ಲವೇ? ಎಂದು ಕೇಳಿದರು. ಆಗ ಗಾಂಧೀಜಿಯವರು ತಮ್ಮ ಅಭಿಮತವನ್ನು ಬಿಚ್ಚಿಟ್ಟರು. ಈ ಒಂದು ತಾಮ್ರದ ನಾಣ್ಯ ಸಾವಿರಾರು ರೂಪಾಯಿಗಳಿಗಿಂತ ಅಮೂಲ್ಯವಾದುದು. ಓರ್ವ ಶ್ರೀಮಂತ ಸಾವಿರಗಟ್ಟಲೇ, ಲಕ್ಷಗಟ್ಟಲೇ ವ್ಯವಹಾರ ಮಾಡಬಹುದು. ಆದರೆ ಆ ಹೆಂಗಸು ತನ್ನ ಬಳಿಯಿದ್ದ ಎಲ್ಲ ಹಣವನ್ನು ನಮಗಾಗಿ ದಾನ ಮಾಡಿದಳಲ್ಲ. ಇಚಿತಹ ಉದಾರ ದಾನಕ್ಕೆ ಸರಿಸಾಟಿಯಿಲ್ಲ ಎಂದು ಗಾಂಧೀಜಿ ವಿವರಿಸಿ ಹೇಳಿದಾಗ ಕೋಟ್ಯಾಧೀಶ್ವರನಾಗಿದ್ದ ಜಮನಾಲಾಲ್ ಬಜಾಜ್‌ರ ಕಂಬನಿಗಳು ತುಂಬಿ ಬಂದವು.

ಈ ಪ್ರಪಂಚದಲ್ಲಿ ದಾನ–ಧರ್ಮಗಳ ಗಾತ್ರ ಮತ್ತು ಮೊತ್ತದ ಹಿರಿಮೆಯಿಂದ ಗೌರವ ಹೆಚ್ಚುವುದಿಲ್ಲ. ಬದಲಾಗಿ ದಾನಿಯ ಹೃದಯದಲ್ಲಿ ಹುದುಗಿರುವ ಔದಾರ್ಯದ ಹಿರಿಮೆ ಮತ್ತು ಪ್ರಾಧಾನ್ಯತೆ ಹೆಚ್ಚಾಗುತ್ತದೆ. ಮಕ್ಕಳೇ, ಬನ್ನಿ ಗಾಂಧೀಜಿಯವರ ಸನ್ಮಾರ್ಗದ ಹಾದಿಯಲ್ಲಿ ಪಯಣಿಸಲು ಪ್ರಯತ್ನಿಸೋಣ. ಗಾಂಧೀಜಿಯವರು ಕಂಡ ಕನಸು ನನಸಾಗಿಸೋಣ. ಅವರ ಶಾಂತಿ ಮತ್ತು ನೀತಿಯನ್ನು ಅರಿತು ಬಾಳೋಣ.



– ಡಾ. ತಯಬಅಲಿ ಅ. ಹೊಂಬಳ, ಗದಗ.

### ಇಂದು ಲಾಲ್ ಬಹದ್ದೂರ್ ಶಾಸ್ತ್ರಿ ಅವರ ಜನ್ಮದಿನದ ನಿಮಿತ್ತ ವಿಶೇಷ ಲೇಖನ

# ಶಾಂತಿ, ಸರಳತೆಯ ಸಾಕಾರಮೂರ್ತಿ



'ಮೂರ್ತಿ ಚಿಕ್ಕದಾದರೂ ಕೀರ್ತಿ ದೊಡ್ಡದು' ಎಂಬ ಗಾದೆಯನ್ನು ಸಾರ್ಥಕಗೊಳಿಸಿದ ಮಹಾವ್ಯಕ್ತಿಗಳು ಹಲವರು. ಶಾಸ್ತ್ರಿಜಿ ಕೂಡಾ ಎತ್ತರದಲ್ಲಿ ಹೆಚ್ಚಲ್ಲ. ಸಾಹಸದಲ್ಲಿ ಕಡಿಮೆಯಲ್ಲ. ದೃಢತೆ, ಸಾಹಸ, ಸಹನೆ ಮತ್ತು ಚಾತುರ್ಯ ಮುಂತಾದವು ಒಂದು ದಿನದಲ್ಲಿ ಅಥವಾ ಒಂದು ವರ್ಷದಲ್ಲಿ ಸಂಪಾದಿಸಿದ ಗುಣಗಳಲ್ಲ. ಅವರ ಬಾಳು ಬೆಳೆದುಬಂದ ಬಗೆಯನ್ನು ಕಂಡಾಗ ಅವರಿಗೆ ಈ ಗುಣಗಳೆಲ್ಲ ಹೇಗೆ ಬಂದುವೆಂಬುದು ಅರ್ಥವಾಗುತ್ತದೆ.

ಭಾರತದ ವೀರ ಪುತ್ರರ ಸಾಲಿಗೆ ಸೇರಿದ ಮಹಾನ್, ಸರಳ ವ್ಯಕ್ತಿ ನಮ್ಮ ಲಾಲ್ ಬಹದ್ದೂರ್ ಶಾಸ್ತ್ರಿ. ಇವರು ಭಾರತದ 2ನೇ ಪ್ರಧಾನ ಮಂತ್ರಿ. ಭಾರತದಲ್ಲಿ ಗಾಂಧೀಜಿಯವರ ನಂತರ ಅಂತಾರಾಷ್ಟ್ರೀಯ ಮಟ್ಟದಲ್ಲಿ ಸರಳತೆ, ಸತ್ಯ ಹಾಗೂ ಅಹಿಂಸೆಯನ್ನು ಸಾರಿದ ವ್ಯಕ್ತಿ ಯಾರಾದರೂ ಇದ್ದರೆ ಅದು ಶಾಂತಿ ದೂತ ಲಾಲ ಬಹದ್ದೂರ ಶಾಸ್ತ್ರೀಜಿಯವರು. ಅವರ ಜನ್ಮದಿನ ಹಾಗೂ ಗಾಂಧೀಜಿಯವರ ಜನ್ಮದಿನ ಎರರೂ ಒಂದೇ ದಿನವಾಗಿದೆ.

ಧೈರ್ಯ, ಆತ್ಮಾಭಿಮಾನಗಳು ಲಾಲ್ ಬಹದ್ದೂರರಿಗೆ ಚಿಕ್ಕಂದಿನಿಂದಲೂ ಬಂದ ಎರಡು ದೊಡ್ಡ ಗುಣಗಳಾಗಿವೆ. ವಾರಾಣಾಸಿಯಲ್ಲಿದ್ದಾಗ ಒಮ್ಮೆ ಇವರು ತಮ್ಮ ಗೆಳೆಯರೊಂದಿಗೆ ಗಂಗೆಯ ಇನ್ನೊಂದು ದಡದಲ್ಲಿದ್ದ ಜಾತ್ರೆಯೊಂದನ್ನು ನೋಡಲು ಹೋದರು. ಬರುವಾಗ ದೋಣಿಯಲ್ಲಿ ಗಂಗೆಯನ್ನು ದಾಟಲು ಅವರ ಬಳಿಯಲ್ಲಿ ಹಣ ಉಳಿದಿರಲಿಲ್ಲ. ಗೆಳೆಯರಲ್ಲಿ ಹಣ ಕೇಳಲು ಅವರ ಸ್ವಾಭಿಮಾನ ಒಪ್ಪಲಿಲ್ಲ. ಗೆಳೆಯರಿಗೆ ಗೊತ್ತಾಗದ ಹಾಗೆ ಅವರು ಗುಂಪಿನಿಂದ ಹಿಂದುಳಿದರು. ಗೆಳೆಯರು ಮಾತಿನ ಭರದಲ್ಲಿ ಲಾಲ್ ಬಹದ್ದೂರರನ್ನು ಮರೆತು ದೋಣಿ ಹತ್ತಿದರು. ಅವರು ಮುಂದೆ ಸಾಗಿದ ಮೇಲೆ, ಮಬ್ಬಿನಲ್ಲಿ ಲಾಲ್ ಬಹದೂರ್ ಗಂಗೆಯಲ್ಲಿ ಧುಮುಕಿ, ಈಜಿ ದಡ ಸೇರಿದರು.

ಬಹಾದೂರ್ ಪುಟ್ಟ ಮೂರ್ತಿಯಾದರೂ ಅವರ ದೈಹಿಕ ಬಲ ಅಸಾಧಾರಣವಾದದ್ದು. ಅದರೊಳಗಿನ ಆತ್ಮಶಕ್ತಿ ಅಪ್ರತಿಮವಾದದ್ದು. ನೀರಿನಲ್ಲಿ ಹೇಗೋ ಹಾಗೆ ಬಾಳಿನಲ್ಲೂ ಅವರು ಈಜಿ ಗೆದ್ದರು. ಲಾಲ್ ಬಹದ್ದೂರ್ ಅವರ ಹಳ್ಳಿಯ ಪಕ್ಕದ ಮಿರ್ಜಾಪುರದ ಲಲಿತಾ ದೇವಿಯವರನ್ನು 1927ರಲ್ಲಿ ವಿವಾಹವಾದರು. ವರದಕ್ಷಿಣೆಯ ಒಂದು ವಿಚಾರವನ್ನು ಹೊರತುಪಡಿಸಿ ಉಳಿದೆಲ್ಲಾ ವಿಚಾರಗಳಲ್ಲಿ ವಿವಾಹ ಸಾಂಪ್ರದಾಯಿಕವಾಗಿತ್ತು.

ಆಗಿನ ಕಾಲದಲ್ಲಿ ದೊಡ್ಡ ಸಾಮಾಜಿಕ ಪಿಡುಗಾಗಿದ್ದ ವರದಕ್ಷಿಣೆಯನ್ನು ಕಟುವಾಗಿ ವಿರೋಧಿಸಿದ್ದರು. ತಮ್ಮ ಮದುವೆಯಲ್ಲಿ ಪತ್ನಿಯ ಮನೆಯಿಂದ ಏನನ್ನೂ ಸ್ವೀಕರಿಸಲು ಇಷ್ಟಪಟ್ಟಿರಲಿಲ್ಲ. ಶಾಸ್ತ್ರಿ ಅವರ ಮಾವನವರು ಹಲವು ಬಾರಿ ಮನವಿ ಮಾಡಿದ ಮೇಲೆ ಕೆಲವು ಮೀಟರ್ ಖಾದಿ ಬಟ್ಟೆಯನ್ನು ಮದುವೆಯ ಉಡುಗೊರೆಯಾಗಿ ಪಡೆದಿದ್ದರು.

ಬ್ರಿಟಿಷ್ ಆಡಳಿತಕ್ಕೆ ವಿರೋಧವಾಗಿ ಸ್ಥಾಪಿಸಲಾದ ಹಲವಾರು ರಾಷ್ಟ್ರೀಯ ಸಂಸ್ಥೆಗಳಲ್ಲೊಂದಾದ ವಾರಣಾಸಿಯ ಕಾಶಿ ವಿದ್ಯಾ ಪೀಠವನ್ನು ಲಾಲ್ ಬಹಾದ್ದೂರ ಶಾಸ್ತ್ರಿ ಸೇರಿದರು. ಅಲ್ಲಿ ಅವರು ದೇಶದ ಶ್ರೇಷ್ಠ ಬುದ್ಧಿವಿಗಳು ಮತ್ತು ರಾಷ್ಟ್ರೀಯವಾದಿಗಳ ಪ್ರಭಾವಕ್ಕೆ ಒಳಗಾದರು. 'ಶಾಸ್ತ್ರಿ' ಎಂಬುದು ವಿದ್ಯಾಪೀಠದಿಂದ ಲಾಲ್ ಬಹದ್ದೂರರಿಗೆ ನೀಡಿದ ಪದವಿ. ಆದರೆ, ಅದು ಅವರ ಹೆಸರಿನ ಭಾಗವಾಗಿ ಜನಮನದಲ್ಲಿ ಉಳಿದುಕೊಂಡಿದೆ.

ಒಟ್ಟಾರೆಯಾಗಿ ಶಾಸ್ತ್ರೀಜಿಯವರು ಬಡತನದಲ್ಲೇ ಹುಟ್ಟಿ, ಬಡತನದಲ್ಲೇ ಬೆಳೆದು, ಬಡತನದಲ್ಲೇ ನಿಧನರಾಧ ಭಾರತದ ಏಕೈಕ ಪ್ರಧಾನಿ. ಬಡತನ ಅವರಿಗೆ ಸಹನೆ, ತಾಳ್ಮೆ ಮತ್ತು ವಿನಯವನ್ನು ಕಲಿಸಿತ್ತು. ಇವರಿಗೆ ಮರಣಾನಂತರ ಭಾರತ ರತ್ನವನ್ನು ಪ್ರದಾನ ಮಾಡಲಾಯಿತು. ಇವರ ಸ್ಮರಣೆಗೆ ದೆಹಲಿಯಲ್ಲಿ ಸ್ಮಾರಕವೊಂದನ್ನು ನಿರ್ಮಿಸಲಾಗಿದೆ. ಇವರ ಜನಪ್ರಿಯ ವಾಕ್ಯ 'ಜೈ ಜವಾನ್, ಜೈ ಕಿಸಾನ್' ಇಂದಿಗೂ ಜನರ ಮನಸ್ಸಿನಲ್ಲಿ ಚಿರಂವಾಗಿ ಉಳಿದಿದೆ.



**– ಬಸವರಾಜ ಎಮ್.ಯರಗುಪ್ಪಿ.**
ಬಿಆರ್‌ಪಿ, ಶಿರಹಟ್ಟಿ– ಲಕ್ಷ್ಮೇಶ್ವರ.

# ಅಗತ್ಯವಿಲ್ಲದವರಿಗೂ ಉಚಿತ ಯೋಜನೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೃಷಿ ಇಲಾಖೆಯಿಂದ ರಿಯಾಯಿತಿ ದರದಲ್ಲಿ ಪೂರೈಸುವ ಹಿಂಗಾರಿ ಹಿಂಗಾಮಿನ ಬಿತ್ತನೆ ಬೀಜಗಳ ವಿತರಣೆಗೆ ಸೋಮವಾರ ಶಾಸಕ ಡಾ.ಚಂದ್ರು ಲಮಾಣಿ ಚಾಲನೆ ನೀಡಿದರು.


ಈ ವೇಳೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಅಗತ್ಯವಿಲ್ಲದವರಿಗೂ ಹಲವು ಉಚಿತ ಯೋಜನೆಗಳನ್ನು ಜಾರಿಗೊಳಿಸಿದೆ. ಆದರೆ ಅನ್ನ ನೀಡುವ ರೈತರಿಗೆ ಬಿತ್ತನೆ ಬೀಜಗಳ ಬೆಲೆಯನ್ನು ಏರಿಕೆ ಮಾಡಿರುವುದು ಸರಿಯಾದ ಕ್ರಮವಲ್ಲ. ಸರ್ಕಾರಕ್ಕೆ ರೈತರ ಬಗ್ಗೆ ಕಾಳಜಿ ಇದ್ದರೆ ಉಚಿತ ಬಿತ್ತನೆ ಬೀಜ, ಸಹಾಯಧನದಡಿ ಗೊಬ್ಬರ ವಿತರಣೆ ಮಾಡಿದರೆ ಉಪಯುಕ್ತವಾಗುತ್ತದೆ. ಈ ನಿಟ್ಟಿನಲ್ಲಿ ರಾಜ್ಯದ ಕೃಷಿ ಸಚಿವರು ಗಮನ ಹರಿಸಬೇಕು ಎಂದರು.




ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಮನಗೂಳಿ ಮಾತನಾಡಿ, ಲಕ್ಷ್ಮೇಶ್ವರ ಕೃಷಿ ಕೇಂದ್ರದಲ್ಲಿ 800 ಕ್ವಿಂಟಲ್ ಕಡಲೆ, 20 ಕ್ವಿಂಟಲ್ ಜೋಳ, 5 ಕ್ವಿಂಟಲ್ ಕುಸಬಿ ಬೀಜ ದಾಸ್ತಾನಿದೆ. ಸಬ್ಸಿಡಿ ಕಡಿತಗೊಳಿಸಿ 20 ಕೆಜಿ ಕಡಲೆ ಪಾಕೀಟಗೆ 1470 ರೂ, 3 ಕೆಜಿ ಜೋಳ 169.50ಪೈಸೆಗೆ ಸಿಗುತ್ತದೆ. 300ರೂಗೆ 5 ಕೆ.ಜಿ ಕುಸುಬಿ ಕೊಡಲಾಗುತ್ತಿದೆ. ಅವಶ್ಯಕ ದಾಖಲೆಗಳನ್ನು ಸಲ್ಲಿಸಿ ರಿಯಾಯಿತಿ ದರದಲ್ಲಿ ಬೀಜ ಖರೀದಿಸಿ. ಹಿಂಗಾರಿನ ಬಿತ್ತನೆಗೆ ಸಕಾಲವಾಗಿದ್ದರೂ ಸದ್ಯ ಭೂಮಿಯಲ್ಲಿ ಬೀಜ ಮೊಳೆಯಲು ತೇವಾಂಶವಿಲ್ಲ. ಮಳೆಯ ವಾತಾವರಣವಿದ್ದು ಒಂದಷ್ಟು ಮಳೆಯಾದ ಮೇಲೆ ಬಿತ್ತಿದರೆ ಉತ್ತಮ. ರೈತ ಸಂಪರ್ಕ ಕೇಂದ್ರದಲ್ಲಿನ ಪ್ರಮಾಣೀಕೃತ ಬೀಜದ ಬದಲಾಗಿ ರೈತರೇ ಸಂಗ್ರಹಿಸಿಟ್ಟ ಬೀಜ ಬಿತ್ತುವ ಮೊದಲು ಗುಣಮಟ್ಟ ಪರಿಶೀಲಿಸಿ ಮತ್ತು ಬೀಜೋಪಚಾರ ಮಾಡಿ ಬಿತ್ತನೆ ಮಾಡಬೇಕು ಎಂದರು.

ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ಚಂದ್ರಶೇಖರ ನರಸಮ್ಮನವರ, ಸಹಾಯಕ ಕೃಷಿ ಅಧಿಕಾರಿ ಎಂ.ಎಚ್. ಹಣಗಿ, ಸಿಬ್ಬಂದಿ ಅಮಿತ್ ಹಾಲೇವಾಡಿಮಠ, ಹರೀಶ ಭದ್ರಾಪುರ, ದೇವರಾಜ ಅತಡಕರ, ಮಹೇಶ ನಂದೆಣ್ಣವರ, ಸಿದ್ದು ಕನವಳ್ಳಿ ಸೇರಿದಂತೆ ರೈತರು ಇದ್ದರು.

# ಸಚಿವ ಎಚ್.ಕೆ. ಪಾಟೀಲರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಹಮ್ಮಿಕೊಂಡಿದ್ದ ಶ್ರಮಜೀವಿಗಳ ಸಮಾವೇಶದಲ್ಲಿ ರಾಜ್ಯ ಸರ್ಕಾರದ ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ, ರಾಜ್ಯ ಸಮಿತಿ ಸಂಚಾಲಕ ಎ.ನರಸಿಂಹಮೂರ್ತಿ, ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಸ್ಲಂ ಜನಾಂದೋಲನ–ಕರ್ನಾಟಕ ಸಂಘಟನಾ ಸಂಚಾಲಕ ಜನಾರ್ಧನ ಹಳ್ಳಿಬೆಂಚಿ, ಸಾವಿತ್ರಿಬಾ ಫುಲೆ ಮಹಿಳಾ ಸಮಿತಿ ಸಂಚಾಲಕಿ ಶೋಭಾ ಕಮತರ, ಜಿಲ್ಲಾ ದಲಿತ ಸಂಘರ್ಷ ಸಮಿತಿ ಸಂಚಾಲಕ ವೆಂಕಟೇಶಯ್ಯ, ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೆಹರುನಿಸಾ ಡಂಬಳ, ಮಕ್ತುಮಸಾಬ ಮುಲ್ಲಾನವರ, ನಜೀರ ಹಾವಗಾರ, ಸಾಕ್ರುಬಾಯಿ ಗೋಸಾವಿ ಮುಂತಾದವರು ಉಪಸ್ಥಿತರಿದ್ದರು.

### ಶ್ರಮಜೀವಿಗಳ ಸಮಾವೇಶದಲ್ಲಿ ಕ್ರಯಪತ್ರ ವಿತರಿಸಿದ ಕೊಳಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಪ್ರಸಾದ ಅಬ್ಬಯ್ಯ

# ಅಭಿವೃದ್ಧಿಯಲ್ಲಿ ನಿರ್ಲಕ್ಷ್ಯ ವಹಿಸಿದರೆ ಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಸ್ಲಂ ಪ್ರದೇಶಗಳ ವಸತಿ ಮತ್ತು ಮೂಲಭೂತ ಸೌಲಭ್ಯಕ್ಕಾಗಿ ರಾಜ್ಯ ಸರ್ಕಾರದಿಂದ ನೀಡಲಾಗುತ್ತಿರುವ ಅನುದಾನವನ್ನು ಸರಿಯಾಗಿ ಬಳಕೆ ಮಾಡುವ ಜೊತೆಗೆ ಸ್ಲಂ ಪ್ರದೇಶಗಳ ಅಭಿವೃದ್ಧಿಗೆ ಹೆಚ್ಚು ಒತ್ತು ನೀಡಲಾಗುತ್ತಿದ್ದೆ. ರಾಜ್ಯ ಸರ್ಕಾರದ ನಿರೀ–ಕ್ಷೆಯಂತೆ ಅಧಿಕಾರಿಗಳು ಕೆಲಸ ಮಾಡಬೇಕು, ಒಂದು ವೇಳೆ ಕೊಳಗೇರಿಗಳ ವಸತಿ ಮತ್ತು ಅಭಿವೃದ್ಧಿಯಲ್ಲಿ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಅಂತಹ ಅಧಿಕಾರಿಗಳ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳಲಾಗುವುದೆಂದು ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಪ್ರಸಾದ ಅಬ್ಬಯ್ಯ ಎಚ್ಚರಿಕೆ ನೀಡಿದರು.

ಅವರು ಸ್ಲಂ ಜನಾಂದೋಲನ–ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯಂದ ಹಮ್ಮಿಕೊಂಡಿದ್ದ ಶ್ರಮಜೀವಿಗಳ ಸಮಾವೇಶದಲ್ಲಿ ಗದಗ–ಬೆಟಗೇರಿ ನಗರದ ನೂರಾರು ಸ್ಲಂ ಪ್ರದೇಶದ ಕುಟುಂಬಗಳಿಗೆ ಕ್ರಯಪತ್ರಗಳನ್ನು ವಿತರಿಸಿ ಮಾತನಾಡಿದರು.




ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದ ಬಡವರು, ಮಹಿಳೆಯರು, ಶೋಷಿತರು ಮತ್ತು ಹಿಂದುಳಿದ ಸಮುದಾಯದ ಜನರು ಸ್ವಾಭಿಮಾನದ ಬದುಕು ನಡೆಸಬೇಕೆಂಬ ಉದ್ದೇಶದಿಂದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಇವರೆಲ್ಲರೂ ಮುಖ್ಯವಾಹಿನಿಗೆ ಬರಲು ಹಾಗೂ ಅವರಿಗೆ ಸಮಾನವಾದ ಅವಕಾಶ ಸಿಗಬೇಕೆಂದು ನಮ್ಮ ಸರ್ಕಾರದಿಂದ ಅನೇಕ ಜನಪರ ಯೋಜನೆಗಳನ್ನು ಜಾರಿಗೆ ತಂದಿದ್ದೇವೆ. ಇದು ಡಾ. ಅಂಬೇಡ್ಕರರು ನೀಡಿರುವ ಸಂವಿಧಾನದಿಂದ ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿ ರಾಜ್ಯ ಪ್ರವಾಸ ಕೈಗೊಂಡು ಸ್ಥಳೀಯ ಸಂಘಟನೆಗಳ ಮುಖಂಡರ ಸಮ್ಮುಖದಲ್ಲಿ ಕೊಳಗೇರಿಗಳ ಸಮೀಕ್ಷೆ ನಡೆಸಲಾಗುವುದು. ರಾಜ್ಯದ ಕೊಳಗೇರಿ ಪ್ರದೇಶದ ಕುಟುಂಬಗಳ ಆರೋಗ್ಯದ ದೃಷ್ಟಿಯಿಂದ ನಮ್ಮ ಕ್ಲಿನಿಕ್ ಪ್ರಾರಂಭಿಸಲು ಸಮೀಕ್ಷೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಸ್ಲಂ ಜನಾಂದೋಲನ–ಕರ್ನಾಟಕ ಸಂಘಟನಾ ಸಂಚಾಲಕ ಜರ್ನಾಧನ ಹಳ್ಳಿಬೆಂಚಿ, ಸಾವಿತ್ರಿಬಾ ಫುಲೆ ಮಹಿಳಾ ಸಮಿತಿ ಸಂಚಾಲಕಿ ಶೋಭಾ ಕಮತರ, ಜಿಲ್ಲಾ ದಲಿತ ಸಂಘರ್ಷ ಸಮಿತಿ ಸಂಚಾಲಕ ವೆಂಕಟೇಶಯ್ಯ, ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೆಹರುನಿಸಾ ಡಂಬಳ, ಮಕ್ತುಮಸಾಬ ಮುಲ್ಲಾನವರ, ನಜೀರ ಹಾವಗಾರ, ಸಾಕ್ರುಬಾಯಿ ಗೋಸಾವಿ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ಸಮಾವೇಶದ ಅಧ್ಯಕ್ಷತೆ ವಹಿಸಿ ಮಾತನಾಡಿ, ಗದಗ–ಬೆಟಗೇರಿ ನಗರದಲ್ಲಿ ಘೋಷಣೆಯಾಗಿರುವ ಪ್ರದೇಶಗಲ್ಲಿ ವಸತಿ ಮತ್ತು ಮೂಲಭೂತ ಸೌಲಭ್ಯಕ್ಕೆ ಅನುದಾನ ನೀಡಲು, ಅಘೋಷಿತ ಸ್ಲಂ ಪ್ರದೇಶಗಳ ಘೋಷಣೆಗೆ ತಕ್ಷಣ ಕ್ರಮ ಕೈಗೊಳ್ಳಬೇಕು. ಸ್ಲಂ ಸಮಿತಿಯಿಂದ ಜನರ ಸಮಸ್ಯೆಗಳ ಕುರಿತು ಅನೇಕ ಹೋರಾಟಗಳನ್ನು ನಡೆಸಿ ಅಧಿಕಾರಿಗಳ ಗಮನಕ್ಕೆ ತಂದರೂ ಬೆಲೆ ನೀಡದ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಬೇಕೆಂದು ಹೇಳಿದರು.

**ಬೆಳ್ಳಟ್ಟಿಯಲ್ಲಿ ಪೋಷಣ ಅಭಿಯಾನ, ಕೇಂದ್ರ ಸರ್ಕಾರದ ಯೋಜನೆಗಳ ವಿಶೇಷ ಜಾಗೃತಿ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ**

# ಯೋಜನೆಗೆ ಕೇಂದ್ರ ಸರ್ಕಾರದ ಆರ್ಥಿಕ ಸಹಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಅಪೌಷ್ಟಿಕತೆ ನಿವಾರಿಸುವಲ್ಲಿ ಕೇಂದ್ರ ಸರ್ಕಾರ ಆಯೋಜಿಸಿರುವ ರಾಷ್ಟ್ರೀಯ ಪೋಷಣ್ ಅಭಿಯಾನ ಒಂದು ಮಹತ್ತರ ಕಾರ್ಯಕ್ರಮವಾಗಿದ್ದು, ಕಿಶೋರಿ, ಬಾಲಕಿಯರಿಂದ ಹಿಡಿದು ಗರ್ಭಿಣಿಯರು ಸೇರಿದಂತೆ ಮಹಿಳೆಯರು ಮತ್ತು ಮಕ್ಕಳನ್ನು ಅಪೌಷ್ಟಿಕತೆಯಿಂದ ಮುಕ್ತಗೊಳಿಸುವ ಕಾರ್ಯಕ್ರಮ ಇದಾಗಿದೆ ಎಂದು ಸಂಸದ ಮತ್ತು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಭಾರತ ಸರ್ಕಾರದ ಕೇಂದ್ರ ಸಂವಹನ ಇಲಾಖೆ, ಧಾರವಾಡ ವಾರ್ತಾ ಮತ್ತು ಪ್ರಸಾರ ಸಚಿವಾಲಯ, ತಾಲೂಕು ಆಡಳಿತ, ತಾಲೂಕು ಪಂಚಾಯತ್, ಶಿಶು ಅಭಿವೃದ್ಧಿ ಯೋಜನೆ, ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಶಿಕ್ಷಣ ಇಲಾಖೆ, ಶಿರಹಟ್ಟಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ, ವಿವಿಧ ಶಾಲೆಗಳು ಹಾಗೂ ಗ್ರಾಮ ಪಂಚಾಯತ ಬೆಳ್ಳಟ್ಟಿ ಇವರ ಸಂಯುಕ್ತಾಶ್ರಯದಲ್ಲಿ ಗ್ರಾಮದ ಎಪಿಎಂಸಿ ಸಮುದಾಯ ಭವನದಲ್ಲಿ ಪೋಷಣ ಅಭಿಯಾನ, ಸ್ವಚ್ಛತೆಯೇ ಸೇವೆ, ಹೊಸ ಕ್ರಿಮಿನಲ್ ಕಾನೂನುಗಳು, ಪ್ರಧಾನ ಮಂತ್ರಿ ಸೂರ್ಯ ಘರ್ ಯೋಜನೆ, ಪ್ರಧಾನ ಮಂತ್ರಿಯವರ ದೂರದೃಷ್ಟಿ-2047, ಏಕ್ ಭಾರತ- ಶ್ರೇಷ್ಠ ಭಾರತ ಹಾಗೂ ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಕುರಿತು ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಯೋಜನೆಗೆ ಕೇಂದ್ರ ಸರ್ಕಾರ ಸಂಪೂರ್ಣ ಆರ್ಥಿಕ ಸಹಾಯ ನೀಡುತ್ತಿದ್ದು, ರಾಜ್ಯ ಸರ್ಕಾರಗಳ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮೂಲಕ ದೇಶದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ ಆರೋಗ್ಯ ಬಗ್ಗೆ ಗಮನ ನೀಡಲಾಗುತ್ತಿದೆ. ಕೇಂದ್ರ ಸರ್ಕಾರ ದೇಶದ ಪ್ರತಿಯೊಬ್ಬ ನಾಗರಿಕರ ಜೀವನ ಮಟ್ಟದ ಜೊತೆಗೆ ಆರೋಗ್ಯ, ಶಿಕ್ಷಣ, ನೈಮಲ್ಯ, ಸ್ವಚ್ಛತೆಗೆ ಹೆಚ್ಚು ಗಮನ ಹರಿಸಿ ದೇಶದ ಪ್ರತಿಯೊಬ್ಬರು ಅಭಿವೃದ್ಧಿ ಹೊಂದುವ ಉದ್ದೇಶ ಹೊಂದಿದೆ ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕೇಂದ್ರ ಸಂವಹನ ಇಲಾಖೆ, ಧಾರವಾಡದ ಕಾರ್ಯಕ್ರಮ ಸಂಯೋಜಕರಾದ ಮುರಳೀದರ ತುಕ್ಕಪ್ಪ ಕಾರಭಾರಿ, ಕೇಂದ್ರ ಸರ್ಕಾರ ಆರೋಗ್ಯ, ಶಿಕ್ಷಣ, ಸ್ವಚ್ಛತೆ ಜೊತೆಗೆ ಮಕ್ಕಳ ಮಹಿಳೆಯಲ್ಲಿರುವ ಅಪೌಷ್ಟಿಕತೆ ನಿವಾರಣೆ ದೃಷ್ಟಿಯಿಂದ ಪೋಷಣ ಅಭಿಯಾನ ಮೂಲಕ ಸದೃತ ಭಾರತ ನಿರ್ಮಿಸುವಲ್ಲಿ ಮುಂದಾಗಿದೆ. ಸಾರ್ವಜನಿಕರು ಎಲ್ಲಾ ಯೋಜನೆಗಳ ಸಮರ್ಪಕ ಮಾಹಿತಿ ಪಡೆದು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.



ಕಾರ್ಯಕ್ರಮಕ್ಕೂ ಮುನ್ನ ಗಣ್ಯರು ತಾಯಿ ಹೆಸರಲ್ಲಿ ಒಂದು ಸಸಿ ಅಭಿಯಾನದ ಅಂಗವಾಗಿ ಸಸಿ ನೆಟ್ಟರು. ಬೆಳ್ಳಟ್ಟಿ ಗ್ರಾಮದ ಪ್ರಮುಖ ಬೀದಿಗಳಲ್ಲಿ ಕೇಂದ್ರ ಸರ್ಕಾರದ ಯೋಜನೆಗಳ ಕುರಿತು ಶಾಲೆಯ ವಿದ್ಯಾರ್ಥಿಗಳು, ಸಾರ್ವಜನಿಕರು ಬ್ಯಾನರ್‌ಗಳ ಮೂಲಕ ಘೋಷಣೆ ಕೂಗುತ್ತಾ ಜನರಲ್ಲಿ ಜಾಗೃತಿ ಮಾಡಿಸಿದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಸದೃಢವಾದ ಮತ್ತು ಆರೋಗ್ಯವಂತ ಸಮಾಜ ಕಟ್ಟಬೇಕಾದರೆ ಗರ್ಭಿಣಿಯರು, ಬಾಣಂತಿಯರು ಪೌಷ್ಟಿಕ ಆಹಾರ ಬಳಸುವ ಮೂಲಕ ತಮ್ಮ ಮತ್ತು ಮಕ್ಕಳ ಆರೋಗ್ಯ ಕಾಪಾಡಿಕೊಳ್ಳಬೇಕು. ಮಹಿಳೆಯರು ಪೋಷಣ್ ಅಭಿಯಾನದಡಿ ದೊರೆಯುವ ಸವಲತ್ತುಗಳನ್ನು ಮತ್ತು ಆಯುಷ್ಮಾನ್ ಕಾರ್ಡ್ ಮಾಡಿಸಿಕೊಳ್ಳುವ ಮೂಲಕ ಉತ್ತಮ ಆರೋಗ್ಯ ಹೊಂದಬೇಕು ಎಂದರು.


ಸಂಪನ್ಮೂಲ ವ್ಯಕ್ತಿಯಾಗಿ ಶಿರಹಟ್ಟಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮೃತ್ಯುಂಜಯ ಗುಡ್ಡದಾನ್ವೇರಿ ಪೋಷಣ ಮಾಸಾಚರಣೆ ಮತ್ತು ಇಲಾಖೆಯ ಇತರ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದ ಅಂಗವಾಗಿ ಆರೋಗ್ಯ ತಪಾಸಣಾ ಶಿಬಿರ, ಪೌಷ್ಟಿಕ ಆಹಾರ ಪ್ರಾತ್ಯಕ್ಷಿಕೆ, ಅನ್ನಪ್ರಾಶನ, ಉತ್ತಮ ಅಂಗನವಾಡಿ ಕಾರ್ಯಕರ್ತೆಯರಿಗೆ ಸನ್ಮಾನ, ವಿವಿಧ ಸ್ಪರ್ಧೆಗಲ್ಲಿ ವಿಜೇತರಿಗೆ ಬಹುಮಾನ ವಿತರಣೆ ಮತ್ತು ಗ್ರಾಮ ಪಂಚಾಯಿತಿ ಸದಸ್ಯರು, ಸಿಬ್ಬಂದಿ ಹಾಗೂ ಅಧಿಕಾರಿಗಳು ಸ್ವಚ್ಛತೆಯೇ ಸೇವೆ ಅಂಗವಾಗಿ ಸ್ವತಃ ಕಸ ತೆಗೆದು ಜಾಗೃತಿ ಮೂಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾ.ಪಂ ಅಧ್ಯಕ್ಷ ರಮೇಶ ನಿರ್ವಾಣಶೆಟ್ಟರ ವಹಿಸಿದ್ದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷೆ ಗಂಗವ್ವ ತಳವಾರ, ಸದಸ್ಯರಾದ ಶಿವನಗೌಡ ಪಾಟೀಲ, ತಿಮ್ಮರಡ್ಡಿ ಮರಡ್ಡಿ, ನೇತ್ರಾ ಸಜ್ಜನ, ಮೋಹನಚಂದ ಜಿ, ಪರಶುರಾಮ ಮಲ್ಲಾಡದ ಹಾಗೂ ಸರ್ವ ಸದಸ್ಯರು, ಸ್ಥಳೀಯ ಮುಖಂಡರು, ಶಿರಹಟ್ಟಿ ತಹಸೀಲ್ದಾರ ಅನಿಲ ಬಡಿಗೇರ, ತಾ.ಪಂ ಇಒ ಎಸ್.ಎಸ್. ಕಲ್ಮನಿ, ರಾಧಾ ಜಿ, ಪಿಡಿಒ ಎಚ್.ಟಿ. ತಳವಾರ ಹಾಗೂ ಸಿಬ್ಬಂದಿ, ಅಂಗನವಾಡಿ ಮೇಲ್ವಿಚಾರಕಿಯರಾದ ಪಾರ್ವತಿ, ಅನ್ನಪೂರ್ಣ ಹಾಗೂ ಅಂಗನವಾಡಿ, ಆಶಾ ಕಾರ್ಯಕರ್ತೆಯರು, ಸ್ವ ಸಹಾಯ ಸಂಘದ ಸದಸ್ಯರು, ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಗಳು ಭಾಗವಹಿಸಿದ್ದರು. ಶಿಕ್ಷಕ ಗಿರೀಶ ಕೊಡಬಾಳ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ವಿದ್ಯಾರ್ಥಿಗಳಿಂದ ಸ್ವಚ್ಛತಾ ಪ್ರತಿಜ್ಞೆ



■ವಿಜಯಸಾಕ್ಷಿ ಸುದ್ದಿ, ಗದಗ

ಮಹಾತ್ಮ ಗಾಂಧೀಜಿಯವರ 155ನೇ ಜನ್ಮದಿನಾಚರಣೆಯ ಅಂಗವಾಗಿ ರಾಜ್ಯ ಸರಕಾರದ ಆದೇಶದಂತೆ ಅಂಜುಮನ್ ಪಾಲಿಟೆಕ್ನಿಕ್ ಕಾಲೇಜಿನ ವಿದ್ಯಾರ್ಥಿಗಳು, ಸಿಬ್ಬಂದಿ ವರ್ಗದವರು ಹಾಗೂ ಕಾಲೇಜಿನ ಪ್ರಾಚಾರ್ಯ ಕೆ.ಎನ್. ರೇವಣಕರ ಅವರು ಸ್ವಚ್ಛತಾ ಪ್ರತಿಜ್ಞೆಯನ್ನು ಸ್ವೀಕರಿಸಿದರು.

ಭಾರತ ದೇಶ ಸ್ವಚ್ಛ ಮತ್ತು ಅಭಿವೃದ್ಧಿ ಹೊಂದಿದ ದೇಶವಾಗಿರಬೇಕೆಂದು ಕನಸು ಕಂಡು, ಭಾರತ ಮಾತೆಗೆ ಸ್ವಾತಂತ್ರ್ಯ ತಂದುಕೊಟ್ಟ ಮಹಾತ್ಮ ಗಾಂಧೀಜಿಯ ಮಾತುಗಳನ್ನು ನೆನದು, ನನ್ನನ್ನ ನಾನು ಸ್ವಚ್ಛತೆಗೆ ಅರ್ಪಿಸಿಕೊಳ್ಳುವದರ ಜೊತೆಗೆ ಉಳಿದವರನ್ನೂ ಸ್ವಚ್ಛತಾ ಕಾರ್ಯದಲ್ಲಿ ತೊಡಗಿಸಿಕೊಳ್ಳುವ ಹಾಗೆ ಮಾಡುತ್ತೇನೆ ಎಂದು ಪ್ರತಿಜ್ಞೆ ಸ್ವೀಕರಿಸಿದರು.

ಕಾಲೇಜಿನ ಸಿಬ್ಬಂದಿ ಜಗದೀಶ ಕೆ.ನರಗುಂದ ಪ್ರತಿಜ್ಞಾವಿಧಿ ಬೋಧಿಸಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡ ಕಾಲೇಜಿನ ಎನ್.ಎಸ್.ಎಸ್ ಘಟಕದ ಮುಖ್ಯಸ್ಥ ಆರ್.ಎಸ್. ಲಾಯದಗುಂದಿ ಮಾತನಾಡಿದರು. ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರಾದ ಎಲ್.ಎಸ್. ಪಾಟೀಲ, ಆರ್.ಸಿ. ಕೋಟಿ, ಆರ್.ಎಸ್ ಪವಾರ, ರಾಜು ಬೆನಕನಕೊಂಡ, ಗಿರೀಶ ಹಳ್ಳಕೇರಿ, ಎ.ಪಿ. ಜಿನಗಿ ಮತ್ತು ಉಪನ್ಯಾಸಕರಾದ ಎ.ಎಮ್. ಮುಲ್ಲಾ, ಎಫ್.ಬಿ. ಮನಿಯಾರ, ಕಾರ್ಯಾಲಯದ ಸಿಬ್ಬಂದಿಗಳಾದ ಎಸ್.ಎಮ್. ಬಿಜಾಪೂರ, ಎಮ್.ಜೆ. ಹೀರೆಹಾಳ, ಎಮ್. ಆರ್. ಕಾಗದಗಾರ, ಕೆ.ಎಮ್. ಬೋಡ್ಲೆಖಾನ, ಎಮ್.ಎಮ್. ಮುಜಾವರ, ಇಸಾಖ ಎಮ್. ಮುಲ್ಲಾ ಪಾಲ್ಗೊಂಡಿದ್ದರು.

**ಶ್ರಮಜೀವಿಗಳ ಬೃಹತ್ ಸಮಾವೇಶದಲ್ಲಿ ಸಚಿವ ಹೆಚ್.ಕೆ.ಪಾಟೀಲ ಭರವಸೆ**

# ಸ್ಲಂ, ಬಡಜನರಿಗೆ ವಸತಿ





■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ಸ್ಲಂ ಜನರ ವಸತಿ ಮತ್ತು ಕೊಳಗೇರಿಗಳ ಅಭಿವೃದ್ಧಿಗಾಗಿ ನಮ್ಮ ಸರ್ಕಾರದಿಂದ ಸಾಕಷ್ಟು ಅನುದಾನ ನೀಡಿದ್ದೇವೆ. ಸ್ಲಂ ಪ್ರದೇಶದ ಕುಟುಂಬಗಳಿಗೆ ಭೂ ಮಾಲೀಕತ್ವ ನೀಡುವ ಉದ್ದೇಶದಿಂದ 3.52 ಲಕ್ಷ ಕುಟುಂಬಗಳಿಗೆ ಹಕ್ಕುಪತ್ರಗಳನ್ನು ವಿತರಣೆ ಮಾಡಲಾಗುತ್ತಿದ್ದೆ. ರಾಜ್ಯದ ಸ್ಲಂ ನಿವಾಸಿಗಳ ಭೂ ಮಾಲಿಕತ್ವ ಸಿಗುತ್ತಿದೆ. ರಾಜ್ಯದಲ್ಲಿ ಈಗಾಗಲೇ ಸ್ಲಂ ಜನರಿಗೆ ಮತ್ತು ಬಡಜನರಿಗೆ ವಸತಿ ಹಕ್ಕು ಕಾಯ್ದೆ ಜಾರಿಗೆ ತರಲು ಎಲ್ಲಾ ಸಿದ್ಧತೆಗಳನ್ನು ನಮ್ಮ ಸರ್ಕಾರದಿಂದ ಜಾರಿಗೆ ತರಲಾಗುವುದೆಂದು ಸಚಿವ ಹೆಚ್.ಕೆ. ಪಾಟೀಲ ಭರವಸೆ ನೀಡಿದರು.

ಅವರು ನಗರದ ಡಾ.ಬಾಬು ಜಗಜೀವನರಾವ ಕಲ್ಯಾಣ ಮಂಟಪದಲ್ಲಿ ಸ್ಲಂ ಜನಾಂದೋಲನ-ಕರ್ನಾಟಕ ಮತ್ತು ಗದಗ ಜಿಲ್ಲಾ ಸ್ಲಂ ಸಮಿತಿಯಿಂದ ಹಮ್ಮಿಕೊಂಡಿದ್ದ ಶ್ರಮಜೀವಿಗಳ ಬೃಹತ್ ಸಮಾವೇಶವನ್ನು ಉದ್ಘಾಟಿಸಿ ಮಾತನಾಡಿದರು.

ನಮ್ಮ ಸರ್ಕಾರ ನುಡಿದಂತೆ ನಡೆದಿದೆ. ಚುನಾವಣಾ ಪೂರ್ವದಲ್ಲಿ ರಾಜ್ಯದ ಬಡ ಜನತೆಗೆ ನೀಡಿದ ಪಂಚ ಗ್ಯಾರಂಟಿಗಳನ್ನು ನಾವು ಜಾರಿಗೆ ತಂದಿದ್ದೇವೆ. ರಾಜ್ಯದ ಜನರು ನಮ್ಮ ಮೇಲೆ ಇಟ್ಟಿರುವ ವಿಶ್ವಾಸಕ್ಕೆ ತಕ್ಕಂತೆ ಸಿದ್ದರಾಮಯ್ಯನವರ ನೇತೃತ್ವದ ಸರ್ಕಾರದಿಂದ ಬಡ ಜನರ ಪರವಾಗಿ ಯೋಜನೆಗಳನ್ನು ಜಾರಿಗೆ ತರಲಾಗುತ್ತಿದೆ. ಮುಂದಿನ ದಿನಗಳಲ್ಲಿ ಅಸಂಘಟಿತ ಕಾರ್ಮಿಕರ ಪರವಾಗಿ ಕಲ್ಯಾಣ ಮಂಡಳಿಯನ್ನಯನ್ನು ಜಾರಿಗೆ ತಂದು ಸಾಮಾಜಿಕ ಭದ್ರತೆಯನ್ನು ನೀಡುವ ಮೂಲಕ ಶ್ರಮಜೀವಿಗಳ ಸ್ವಾಭಿಮಾನವನ್ನು ಎತ್ತರಕ್ಕೇರಿಸುವ ಕೆಲಸ ಸರ್ಕಾರ ಮಾಡುತ್ತದೆ.

ಪಂಚ ಗ್ಯಾರಂಟಿಗಳ ಜೊತೆಯಲ್ಲಿ ಸ್ಲಂ ಜನರಿಗೆ ವಸತಿ ಯೋಜನೆಗೆ 6200 ಕೋಟಿ ರೂ.ಗಳನ್ನು ಈ ಸರ್ಕಾರ ನೀಡುವ ಮೂಲಕ 6ನೇ ಗ್ಯಾರಂಟಿಯನ್ನು ನೀಡಿದೆ. ಬಡಜನರಿಗೆ ನೀಡಿರುವ ಗ್ಯಾರಂಟಿಗಳನ್ನು ಗೇಲಿ ಮಾಡುವ ಬಿಜೆಪಿ ಪಕ್ಷ ಶ್ರೀಮಂತರ 3.50 ಲಕ್ಷ ಕೋಟಿ ರೂ ತೆರಿಗೆ ಹಣವನ್ನು ಮನ್ನಾ ಮಾಡಿದೆ. ರಾಜ್ಯದಲ್ಲಿ ನಿವೇಶನರಹಿತರ ಸಮಸ್ಯೆ ಪರಿಹಾರಕ್ಕೆ ವಸತಿ ಹಕ್ಕು ಕಾಯ್ದೆ ಜಾರಿ ಮಾಡುವ ಜೊತೆಗೆ ಲ್ಯಾಂಡ್ ಬ್ಯಾಂಕ್ ಯೋಜನೆಯನ್ನು ಜಾರಿಗೊಳಿಸಿ ಹೊಸ ಕ್ರಿಮಿನಲ್ ಕಾನೂನುಗಳ ಮೂಲಕ ಸನಾತನ ಕಾನೂನುಗಳನ್ನು ಪುನಃ ಜಾರಿಗೊಳಿಸಲು ಒಕ್ಕೂಟ ಸರ್ಕಾರ ಮುಂದಾಗಿದೆ. ರಾಜ್ಯದಲ್ಲಿ ಇದರ ಸಾಧಕ-ಬಾಧಕಗಳನ್ನು ಪರಿಶೀಲಿಸಿ ಹೊಸ ಕಾನೂನುಗಳನ್ನು ಜಾರಿಗೊಳಿಸಬೇಕೆಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್.ಮಾನ್ವಿ ವಹಿಸಿದ್ದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಗದಗ ಜಿಲ್ಲಾ ಸ್ಲಂ ಸಮಿತಿ ಉಪಾಧ್ಯಕ್ಷ ಅಶೋಕ ಕುಡತಿನ್ನಿ, ಸ್ಲಂ ಜನಾಂದೋಲನ-ಕರ್ನಾಟಕ ಸಂಘಟನಾ ಸಂಚಾಲಕ ಜನಾರ್ಧನ ಹಳ್ಳಿಬೆಂಚಿ, ಸಾವಿತ್ರಿಬಾ ಫುಲೆ ಮಹಿಳಾ ಸಮಿತಿ ಸಂಚಾಲಕಿ ಶೋಭಾ ಕಮತರ, ಜಿಲ್ಲಾ ದ.ಸಂ.ಸ ಸಂಚಾಲಕ ವೆಂಕಟೇಶಯ್ಯ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ಸ್ಲಂ ಸಮಿತಿ ಪ್ರಧಾನ ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ

**ಬ್ರಹ್ಮಶ್ರೀ ನಾರಾಯಣ ಗುರುಗಳ 170ನೇ ಜಯಂತ್ಯುತ್ಸವದಲ್ಲಿ ಸಂಸದ ಬಸವರಾಜ ಬೊಮ್ಮಾಯಿ**

# ಸಮಾಜದಲ್ಲಿ ಸಮಾನತೆಗಾಗಿ ನಾರಾಯಣ ಗುರುಗಳ ಪಾತ್ರ ಅಪಾರ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ಬಸವತತ್ವ ಮತ್ತು ನಾರಾಯಣ ಗುರುಗಳ ತತ್ವಗಳ ನಡುವೆ ಸಾಮ್ಯವಿರುವುದರಿಂದ ಸಮಾಜದಲ್ಲಿ ಸಮಾನತೆಯನ್ನು ತರುವುದಕ್ಕಾಗಿ ಬ್ರಹ್ಮಶ್ರೀ ನಾರಾಯಣ ಗುರುಗಳ ಪಾತ್ರ ಅಪಾರವಾಗಿದೆ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಅವರು ಸೋಮವಾರ ಶಿರಹಟ್ಟಿ ತಾಲೂಕಿನ ಪರಸಾಪೂರ ಗ್ರಾಮದಲ್ಲಿ ತಾಲೂಕು ಆರ್ಯ ಈಡಿಗ ಸಮಾಜದ ವತಿಯಿಂದ ಬ್ರಹ್ಮಶ್ರೀ ನಾರಾಯಣ ಗುರುಗಳ 170ನೇ ಜಯಂತ್ಯುತ್ಸವ, ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ನೂತನ ಪದಾಧಿಕಾರಿಗಳ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸಮಾಜಗಳು ಕೇವಲ ಆರ್ಥಿಕ, ಸಾಮಾಜಿಕ ಮತ್ತು ಶೈಕ್ಷಣಿಕವಾಗಿ ಪ್ರಗತಿ ಸಾಧಿಸಿದರೆ ಸಾಲದು ಮಾನವೀಯ ಮೌಲ್ಯಗಳನ್ನು ಸಹ ಅಳವಡಿಸಿಕೊಳ್ಳಬೇಕು. ಈ ನಿಟ್ಟಿನಲ್ಲಿ ನಾರಾಯಣ ಗುರುಗಳು ತಮ್ಮ ಭಕ್ತಿ ಕ್ರಾಂತಿಯ ಮೂಲಕ ರಾಜ್ಯದಲ್ಲಷ್ಟೇ ಅಲ್ಲದೇ ನೆರೆಯ ತಮಿಳುನಾಡು ಮತ್ತು ಕೇರಳ ರಾಜ್ಯದಲ್ಲೂ ಸಹ ಅಪಾರ ಭಕ್ತರನ್ನು ಹೊಂದಿದ್ದಾರೆ. ಹುಟ್ಟು-ಸಾವು ನಮ್ಮ ಕೈಯಲ್ಲಿಲ್ಲ, ಬದುಕು ನಮ್ಮ ಕೈಯಲ್ಲಿದ್ದು ಎಲ್ಲರೊಂದಿಗೆ ಪ್ರೀತಿ-ವಿಶ್ವಾಸ, ಸಂತೋಷ ನೆಮ್ಮದಿಯಿಂದ ಮುನ್ನಡೆಯಬೇಕು ಎಂದರು.


ಸಮಾಜದ ಯುವಕರು ಶಿಕ್ಷಣಕ್ಕೆ ಆದ್ಯತೆ ನೀಡಬೇಕು. 21ನೇ ಶತಮಾನ ಜ್ಞಾನದ ಶತಮಾನವಾಗಿದೆ. ಹೆಚ್ಚು ವಿದ್ಯಾವಂತರಾಗಿ ಸ್ವಾವಲಂಬಿ ಬದುಕನ್ನು ಸಾಗಿಸುವುದರ ಮೂಲಕ ನಾರಾಯಣ ಗುರುಗಳ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕೆಂದು ಹೇಳಿದರು.

ಶಿವಮೊಗ್ಗ ಜಿಲ್ಲೆಯ ನಿಟ್ಟೂರಿನ ನಾರಾಯಣ ಗುರು ಮಹಾಸಂಸ್ಥಾನದ ಪೀಠಾಧಿಪತಿ ರೇಣುಕಾನಂದ ಸ್ವಾಮೀಜಿ ಮಾತನಾಡಿ, ಹಿಂದುಳಿದ ಮಠಗಳು ಮುನ್ನೆಲೆಗೆ ಬರುವುದಕ್ಕಾಗಿ ಏಕಕಾಲದಲ್ಲಿ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ 110ಕೋಟಿ ಅನುದಾನ ನೀಡಿದ್ದರು. ಜೊತೆಗೆ ಸಮಾಜದ ನಿಗಮ ಘೋಷಣೆ ಮಾಡಿ ಸಮಾಜದಲ್ಲಿ ಒಳ್ಳೆಯ ಕೆಲಸಗಳನ್ನು ಮಾಡಿದ್ದಾರೆ. ಶ್ರೀಪೀಠಕ್ಕೂ ಸಹ ಅನುದಾನ ನೀಡಿದ್ದಾರೆ. ಶಿರಹಟ್ಟಿ ಭಾಗದಲ್ಲೂ ಸಹ ನಾರಾಯಣ ಗುರುಗಳ ಸಮುದಾಯ ಭವನವನ್ನು ನಿರ್ಮಿಸಲು ಅನುದಾನ ನೀಡಬೇಕೆಂದು ಹೇಳಿದರು.

ಶಾಸಕರಾದ ಸಿ.ಸಿ. ಪಾಟೀಲ, ಡಾ. ಚಂದ್ರು ಲಮಾಣಿ, ಶಿರಹಟ್ಟಿ ತಾಲೂಕಾ ಆರ್ಯ ಈಡಿಗ ಸಮಾಜದ ಅಧ್ಯಕ್ಷ ಶ್ರೀಕಾಂತ ಈಳಿಗೇರ, ರಾಜು ಕುರಡಗಿ, ಡಾ. ಭೀಮಸಿಂಗ್ ರಾಠೋಡ, ಎಂ.ಎಸ್. ಕರಿಗೌಡ್ರ, ಜಾನು ಲಮಾಣಿ, ಡಾ. ಗೋವಿಂದ ಬಾಬು ಪೂಜಾರಿ, ನಾಗರಾಜ ಗುತ್ತೇದಾರ, ಕೆಪಿಸಿಸಿ ಪ್ರ.ಕಾ. ಸುಜಾತಾ ದೊಡ್ಡಮನಿ, ಜಗದೀಶ ಈಳಗೇರ, ಚಂದ್ರಕಾಂತ ಹಾನಗಲ್, ಮಾರುತಿ ಈಳಗೇರ, ಯಮನಪ್ಪ ಈಳಗೇರ, ಪರಶುರಾಮ ಈಳಗೇರ, ಪಾಲಾಕ್ಷಪ್ಪ ಈಳಗೇರ, ಶರಣಪ್ಪ ಈಳಗೇರ, ಕಲ್ಲಪ್ಪ ಈಳಗೇರ, ಆಂಜನೇಯ ಈಳಗೇರ, ಹಾಲಪ್ಪ ಈಳಗೇರ, ವಿಶ್ವನಾಥ ಈಳಗೇರ, ವಿರುಪಾಕ್ಷಪ್ಪ ಈಳಗೇರ, ಬಸವರಾಜ ಈಳಗೇರ, ಪವನ ಈಳಗೇರ, ಮರಿಯಪ್ಪ ಈಳಗೇರ, ರಾಕೇಶ ಈಳಗೇರ, ನಿಂಗಪ್ಪ ಈಳಗೇರ, ಧರ್ಮಣ್ಣ ಈಳಗೇರ, ಷಣ್ಮುಖಪ್ಪ ಈಳಗೇರ, ವಿಠ್ಠಲ ಈಳಗೇರ ಮುಂತಾದವರು ಉಪಸ್ಥಿತರಿದ್ದರು.

# ಗಾಂಧೀಜಿ, ಶಾಸ್ತ್ರೀಜಿ ಜಯಂತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ



ಅಕ್ಟೋಬರ್ 2ರಂದು ಬೆಳಿಗ್ಗೆ 8.30ಕ್ಕೆ ಗದಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಆವರಣದಲ್ಲಿರುವ ಶ್ರೀ ರಾಮಕೃಷ್ಣ ವಿವೇಕಾನಂದ ಆಶ್ರಮದಲ್ಲಿ ಪೂಜ್ಯಶ್ರೀ ಸ್ವಾಮಿ ನಿರ್ಭಯಾನಂದ ಸರಸ್ವತಿ ಸ್ವಾಮಿಗಳ ನೇತೃತ್ವದಲ್ಲಿ ಮಹಾತ್ಮ ಗಾಂಧೀಜಿ ಹಾಗೂ ಲಾಲಬಹದ್ದೂರ ಶಾಸ್ತ್ರೀ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದಲ್ಲಿ ಕಾನೂನು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಅಧ್ಯಕ್ಷರು ಹಾಗೂ ರೋಣ ಮತಕ್ಷೇತ್ರದ ಶಾಸಕರಾದ ಜಿ.ಎಸ್. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ, ಕಾಂಗ್ರೆಸ್ ಮುಖಂಡರಾದ ಆನಂದ ಗಡ್ಡದೇವರಮಠ ಹಾಗೂ ಸುಜಾತಾ ದೊಡ್ಡಮನಿ ಉಪಸ್ಥಿತರಿರುವರು.

ಹಾಲಿ ಹಾಗೂ ಮಾಜಿ ಶಾಸಕರು, ಕಾಂಗ್ರೆಸ್ ಪಕ್ಷದ ಜಿಲ್ಲಾ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪದಾಧಿಕಾರಿಗಳು, ಪಕ್ಷದ ಜಿಲ್ಲಾ ಪಂಚಾಯತ್, ತಾಲೂಕು ಪಂಚಾಯತ, ಗ್ರಾಮ ಪಂಚಾಯತ, ಎ.ಪಿ.ಎಂ.ಸಿ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಎಸ್ಸಿ/ಎಸ್ಟಿ ಘಟಕದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಕಿಸಾನ್ ಘಟಕ, ಸಾಮಾಜಿಕ ಜಾಲತಾಣ, ಅಸಂಘಟಿತ ಕಾರ್ಮಿಕರ ಘಟಕ, ಗದಗ ಜಿಲ್ಲಾ ಮೀನುಗಾರಿಕೆ ಘಟಕ, ಅಲ್ಪಸಂಖ್ಯಾತರ ಘಟಕದ ಪದಾಧಿಕಾರಿಗಳು ಹಾಗೂ ಅಧ್ಯಕ್ಷರು, ರಾಜೀವಗಾಂಧಿ ಪಂಚಾಯತ ರಾಜ್ ಸಂಘಟನೆ ಅಧ್ಯಕ್ಷರು ಹಾಗೂ ಸದಸ್ಯರು ಈ ಕಾರ್ಯಕ್ರಮಕ್ಕೆ ಹಾಜರಾಗಲು ಗದಗ ಬೆಟಗೇರಿ ಶಹರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಬಿ.ಅಸೂಟಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಬಿಜೆಪಿಯಿಂದ ಮಾತ್ರ ದೇಶದ ಪ್ರಗತಿ

■ವಿಜಯಸಾಕ್ಷಿ ಸುದ್ದಿ, ರೋಣ

ಬಿಜೆಪಿ ಪಕ್ಷದಿಂದ ಮಾತ್ರ ದೇಶದ ಪ್ರಗತಿ ಎನ್ನುವುದನ್ನು ನಾಗರಿಕ ಸಮುದಾಯ ಮರೆಯಬಾರದು ಎಂದು ರೋಣ ಮಂಡಲ ಬಿಜೆಪಿ ಅಧ್ಯಕ್ಷ ಮುತ್ತಣ್ಣ ಕಡಗದ ಹೇಳಿದರು.


ಅವರು ತಾಲೂಕಿನ ಮುದೇನಗುಡಿ ಹಾಗೂ ಕುರಹಟ್ಟಿ ಗ್ರಾಮಗಳಲ್ಲಿ ಬಿಜೆಪಿ ಪಕ್ಷದ ಸದಸ್ಯತಾ ಅಭಿಯಾನ ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದರು.

ದೇಶದ ಪ್ರಧಾನಿಯಾಗಿ ನರೇಂದ್ರ ಮೋದಿಯವರು ಅಧಿಕಾರ ಸ್ವೀಕರಿಸಿದ ನಂತರ ಇಡೀ ವಿಶ್ವ ಇಂದು ಭಾರತವನ್ನು ನೋಡುತ್ತಿದೆ. ಭಾರತ ಇಂದು ಅಭಿವೃದ್ಧಿಯತ್ತ ಸಾಗುತ್ತಿರುವ ದೇಶವಾಗಿದೆ ಎಂಬುದರಲ್ಲಿ ಅನುಮಾನವಿಲ್ಲ. ಕಾರಣ, ಇಂದು ನರೇಂದ್ರ ಮೋದಿಯವರು ದೇಶದ ರಕ್ಷಣೆಗೆ ಬದ್ಧರಾಗಿದ್ದಾರೆ ಎಂದರು.


ರಾಜ್ಯದಲ್ಲಿ ಬಿಜೆಪಿ ಸರಕಾರವಿದ್ದಾಗ ಅಂದಿನ ಶಾಸಕ ಕಳಕಪ್ಪ ಬಂಡಿಯವರು ಕ್ಷೇತ್ರಕ್ಕೆ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ತರುವ ಮೂಲಕ ಕ್ಷೇತ್ರದ ಜನತೆಯ ಆಶೋತ್ತರಗಳನ್ನು ಈಡೇರಿಸುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ. ಹೀಗಾಗಿ ಕ್ಷೇತ್ರದ ಜನರು ದೇಶದ ಮತ್ತು ನಾಡು-ನುಡಿಯ ರಕ್ಷಣೆಗಾಗಿ ಬಿಜೆಪಿ ಸದಸ್ಯತ್ವವನ್ನು ಪಡೆಯುವ ಮೂಲಕ ಬೆಂಬಲಿಸಬೇಕು ಎಂದರು.



ಶರಣಪ್ಪ ಪ್ಯಾಟಿ, ರಮೇಶ ವಕ್ಕರ, ಬಾಲಾಜಿರಾವ್ ಬೂಸ್ಲೆ, ರಾಜು ಚೆನ್ನಪ್ಪಗೌಡ್ರ, ಉಮೇಶ ಪಾಟೀಲ, ವಸಂತರಾವ್ ಉದ್ದಾರ, ಶಿವು ಮುದಿಬಸನಗೌಡ್ರ, ಎಸ್.ಜಿ. ಹಡಗಲಿ, ವಿರೇಶ ಬಿಲ್ಲಡಗಿ, ಭರತ ಹುಬ್ಬಳ್ಳಿ, ವಿಶ್ವ ಕಾಡಶಿದ್ದೇಶ್ವರಮಠ, ಮಹಾಂತೇಶ ಅವರಾದಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.




ಮಹಾತ್ಮ ಗಾಂಧೀಜಿಯವರ 155ನೇ ಜನ್ಮದಿನಾಚರಣೆ



ಶ್ರೀ ಲಾಲ್ ಬಹದ್ದೂರ್ ಶಾಸ್ತ್ರಿಯವರ 120ನೇ ಜನ್ಮದಿನಾಚರಣೆ

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ





# ಸತ್ಯಕ್ಕಾಗಿ ಹೋರಾಟ...

## ಗಾಂಧೀಜಿ ಕಲಿಸಿದ ಪಾಠ

## "ಸತ್ಯಮೇವ ಜಯತೇ...

ಮಹಾತ್ಮ ಗಾಂಧೀಜಿಯವರಿಗೆ ಸತ್ಯವೇ ದೇವರು. ಸತ್ಯಶೋಧನೆಗಾಗಿ ತಮ್ಮ ಜೀವನವನ್ನೇ ಮುಡುಪಾಗಿಟ್ಟಿದ್ದರು. ಅಸತ್ಯದ ಮೇಲೆ ಸತ್ಯ ಜಯಗಳಿಸುತ್ತದೆ ಎಂದು ದೃಢವಾಗಿ ನಂಬಿದ್ದರು. ಗಾಂಧೀಜಿಯವರ ಜೀವನ ತೆರೆದ ಪುಸ್ತಕದಂತೆ. ಅವರ ಸಂದೇಶಗಳು ಸರ್ವಕಾಲಿಕ ಸತ್ಯ. ಇಂದಿಗೂ ಪ್ರಸ್ತುತ. ನಮ್ಮ ಸರ್ಕಾರ ಸತ್ಯವನ್ನು ಎತ್ತಿ ಹಿಡಿಯುವಲ್ಲಿ ಮತ್ತು ಸಾಮಾಜಿಕ ನ್ಯಾಯವನ್ನು ಪರಿಪಾಲಿಸುವಲ್ಲಿ ಸದಾ ಗಾಂಧೀಜಿಯವರ ಮೌಲ್ಯಗಳನ್ನು ಅಳವಡಿಸಿಕೊಂಡು ಮುನ್ನಡೆದಿದೆ."

– ಸಿದ್ದರಾಮಯ್ಯ, ಮುಖ್ಯಮಂತ್ರಿ



ಶ್ರೀ ಡಿ. ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು



ನುಡಿದಂತೆ ನಡೆದಿದ್ದೇವೆ...

ಶಕ್ತಿ – ಮಹಿಳೆಯರಿಗೆ ಬಸ್ ಪ್ರಯಾಣ ಉಚಿತ

ಅನ್ನಭಾಗ್ಯ – ಬಡವರಿಗೆ ಪ್ರತಿ ತಿಂಗಳು 10 kg (5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170)

ಗೃಹಜ್ಯೋತಿ – ಪ್ರತಿ ಮನೆಗೆ 200 ಯೂನಿಟ್‌ವರೆಗೆ ವಿದ್ಯುತ್ ಉಚಿತ

ಗೃಹಲಕ್ಷ್ಮಿ – ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು ₹2000

ಯುವನಿಧಿ – ಪ್ರತಿ ತಿಂಗಳು ನಿರುದ್ಯೋಗ ಭತ್ಯೆ ₹3000 ಪದವೀಧರರಿಗೆ | ₹1500 ಡಿಪ್ಲೋಮಾ ಪದವೀಧರರಿಗೆ

"ಸ್ವಾತಂತ್ರ್ಯ ಹೋರಾಟಕ್ಕೆ ಸ್ಫೂರ್ತಿಕೊಟ್ಟವರ ಆದರ್ಶಗಳನ್ನು ಗೌರವಿಸುವುದು ಮತ್ತು ಪಾಲಿಸುವುದು ಪ್ರತಿಯೊಬ್ಬ ಭಾರತೀಯರ ಸಂವಿಧಾನಬದ್ಧ ಮೂಲಭೂತಕರ್ತವ್ಯ"

CMofKarnataka https://dipr.karnataka.gov.in/

ಕರ್ನಾಟಕ ವಾರ್ತೆ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka